ಸಂಪುಟ : 9 ಸಂಚಿಕೆ 234 ಪುಟ : 4 ಬೆಲೆ: 3.00 ಶುಕ್ರವಾರ ಅಕ್ಟೋಬರ್ 25 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 234 Pages : 4 Price : 3.00 Friday October 25 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಸಾರ್ವಜನಿಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಂಡರಗಿ ಪುರಸಭೆ ವ್ಯಾಪ್ತಿಯಲ್ಲಿರುವ ವಾರ್ಡ್ ಸಂಖ್ಯೆ 1 ರಿಂದ 23 ವಾರ್ಡ್‌ಗಳಲ್ಲಿ ಅಕ್ಟೋಬರ್ 24 ರಿಂದ ಅಕ್ಟೋಬರ್ 29 ರ ವರಗೆ (ಸರ್ಕಾರಿ ರಜೆ ಹೊರತುಪಡಿಸಿ) ಮತ್ತು ಪುರಸಭೆ ಗಾಂಧಿ ಭವನದಲ್ಲಿ ಎಮ್ ಎಸ್ ಬರದೂರ, ಕು. ಶಾರದಾ ಕೆ.ವಿ ರಣದಪ್ಪ ಹಿರೇಮನಿ, ಮೇಘರಾಜ ಲಾಲಪಡಿ, ರವಿ ಬೆನಕೊಪ್ಪ, ಕೆ.ಎಸ್.ಪಾಟೀಲ ಒಳಗೊಂಡ ತಂಡವು ಮ್ಯಾನ್ಯೂಯಲ್ ಸ್ಕ್ಯಾವೆಂಜರ್ ಹಾಗೂ ಅನೈರ್ಮಲ್ಯ (ಇನ್–ಸ್ಯಾನಿಟರಿ ಲ್ಯಾಟ್ರಿನ್) ಶೌಚಾಲಯಗಳ ಸಮೀಕ್ಷೆ ಕಾರ್ಯವನ್ನು ಮುಂಜಾನೆ 10.00 ಗಂಟೆಯಿಂದ ಸಾಯಂಕಾಲ 5.30 ರ ವರೆಗೆ ಕೈಗೊಳ್ಳಲು ಸಮಯ ನಿಗದಿಪಡಿಸಿದೆ.

ಮ್ಯಾನ್ಯೂಯಲ್ ಸ್ಕ್ಯಾವೆಂಜರ್ಸ್ ಹಾಗೂ ಅನೈರ್ಮಲ್ಯ (ಇನ–ಸ್ಯಾನಿಟರಿ ಲ್ಯಾಟ್ರಿನ್) ಶೌಚಾಲಯಗಳು ಇದ್ದಲ್ಲಿ ಸಾರ್ವಜನಿಕರು ಮಾಹಿತಿ ನೀಡಲು ಕಚೇರಿ ಆರೋಗ್ಯ ವಿಭಾಗ: ಎಮ್ ಎಸ್ ಬರದೂರ (ದೂರವಾಣಿ ಸಂಖ್ಯೆ–8147602815) (ಕಿ.ಆ.ನಿ) ಕು. ಶಾರದಾ ಕೆ.ವಿ (ದೂರವಾಣಿ ಸಂಖ್ಯೆ–7975353628) ಕಿ.ಆ.ನಿ ಎಮ್ ಎಮ್ ದೊಡ್ಡಮನಿ (ದೂರವಾಣಿ ಸಂಖ್ಯೆ–9741568576) ಹಾಗೂ ಮುಖ್ಯಾಧಿಕಾರಿ ಶಂಕರ ಹುಲ್ಲಮ್ಮನವರ (ದೂರವಾಣಿ ಸಂಖ್ಯೆ–9535148170) ಮಾಹಿತಿ ಹಾಗೂ ದಾಖಲೆಗಳನ್ನು ನೀಡಬಹುದಾಗಿದೆ.

## ಜಿಮ್ಸ್ ಕನ್ನಡ ಬಳಗದಿಂದ ಚರ್ಚಾ ಸ್ಪರ್ಧೆ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಕನ್ನಡ ಬಳಗದಿಂದ ಅ.26ರಂದು ಗದಗ ಜಿಲ್ಲಾ ಮಟ್ಟದ ಪದವಿ ಹಾಗೂ ಪದವಿಪೂರ್ವ ಒಳಗೊಂಡ ಅಂತರ ಕಾಲೇಜು ಚರ್ಚಾ ಸ್ಪರ್ಧೆ ವಾಕ್– ವೈಭವ, ವಿಚಾರಗಳ ಸಂಘರ್ಷ ಕಾರ್ಯಕ್ರಮವನ್ನು ಸಂಸ್ಥೆಯ ಎ.ಸಿ. ಸಭಾಂಗಣದಲ್ಲಿ ಬೆಳಿಗ್ಗೆ 11 ಗಂಟೆಗೆ ಆಯೋಜಿಸಲಾಗಿದೆ.

'ಮೊಬೈಲ್ ಬಳಕೆ ಪೂರಕವೋ ಅಥವಾ ಮಾರಕವೋ' ಎಂಬ ವಿಷಯದ ಮೇಲೆ ಚರ್ಚಾ ಸ್ಪರ್ಧೆ ಏರ್ಪಡಿಸಲಾಗಿದ್ದು, ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ನಿವೃತ್ತ ಪ್ರಾಚಾರ್ಯ, ಸಾಹಿತಿಗಳಾದ ಪ್ರೊ. ಸಿದ್ದು ಯಾಪಲಪರವಿ ಹಾಗೂ ನಿವೃತ್ತ ಪ್ರಾಚಾರ್ಯ ಪ್ರೊ. ಅನಿಲ ವೈದ್ಯ ಆಗಮಿಸಲಿದ್ದಾರೆ. ಗೌರವ ಆಹ್ವಾನಿತರಾಗಿ ಸಂಸ್ಥೆಯ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ, ಪ್ರಾಂಶುಪಾಲ ಡಾ. ರಾಜು ಜಿ.ಎಂ., ವೈದ್ಯಕೀಯ ಅಧೀಕ್ಷಕರಾದ ಡಾ. ರೇಖಾ ಸೋನಾವನೆ, ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ. ಬಿ.ಸಿ. ಕರಿಗೌಡರ, ಡಾ. ಶಕುಂತಲಾ ಅರಮನಿ ಆಗಮಿಸಲಿದ್ದಾರೆ.

ಪ್ರತಿ ಕಾಲೇಜಿನಿಂದ ಒಂದು ತಂಡ ಭಾಗವಹಿಸಬಹುದಾಗಿದ್ದು, ತಮ್ಮ ಕಾಲೇಜಿನ ಗುರುತಿನ ಚೀಟಿಯೊಂದಿಗೆ ಪ್ರಾಂಶುಪಾಲರ ಶಿಫಾರಸ್ಸು ಪತ್ರ ತರಬೇಕು. ವಿಜೇತರಿಗೆ ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರ ನೀಡಲಾಗುವುದು. ಭಾಗವಹಿಸಲು ಇಚ್ಛಿಸುವವರು ಹೆಚ್ಚಿನ ಮಾಹಿತಿಗಾಗಿ ಕನ್ನಡ ಬಳಗದ ಕಾರ್ಯದರ್ಶಿಗಳಾದ ಜಡೆಪ್ಪ ಹೊಸಮನಿ–9731771230,ರೋಹನ್ ಸಿದ್ದಾರ್ಥ–8088599192 ಇವರನ್ನು ಸಂಪರ್ಕಿಸಲು ಕನ್ನಡ ಬಳಗದ ಕಾರ್ಯಾಧ್ಯಕ್ಷ ಡಾ. ಶಂಭು ಪುರದ ತಿಳಿಸಿದ್ದಾರೆ.

### ಮರಕುಂಬಿ ದಲಿತರ ಮೇಲಿನ ದೌರ್ಜನ್ಯ ಪ್ರಕರಣ । ಮಹತ್ವದ ತೀರ್ಪು ನೀಡಿದ ಕೋರ್ಟ್

# 98 ಅಪರಾಧಿಗಳಿಗೆ ಜೀವಾವಧಿ ಶಿಕ್ಷೆ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಜಿಲ್ಲೆಯ ಗಂಗಾವತಿ ತಾಲೂಕಿನ ಮರಕುಂಬಿ ಗ್ರಾಮದ ದಲಿತರ ಮೇಲಿನ ದೌರ್ಜನ್ಯ ಪ್ರಕರಣದಲ್ಲಿ 98 ಜನ ಅಪರಾಧಿಗಳಿಗೆ ಜೀವಾವಧಿ ಶಿಕ್ಷೆ, ಮೂವರಿಗೆ 5 ವರ್ಷ ಶಿಕ್ಷೆ ವಿಧಿಸಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಗುರುವಾರ ಮಹತ್ವದ ಆದೇಶ ಹೊರಡಿಸಿದೆ.

ಅಸ್ಪೃಶ್ಯತೆ ಆಚರಣೆ, ದಲಿತರ ಮೇಲಿನ ದೌರ್ಜನ್ಯದ ಕಾರಣದಿಂದ ಪ್ರಕರಣ ದೇಶದ ಗಮನ ಸೆಳೆದಿತ್ತು. ಗಲಭೆಗೆ ಕಾರಣರಾದ 101 ಜನರ ವಿರುದ್ಧದ ಆರೋಪ ಸಾಬೀತಾಗಿದ್ದು, ನ್ಯಾಯಾಲಯ ಅವರೆಲ್ಲರನ್ನೂ ಅಪರಾಧಿಗಳೆಂದು ತಿಳಿಸಿದೆ. 98 ಅಪರಾಧಿಗಳಿಗೆ ಜೀವಾವಧಿ ಜೈಲು ಶಿಕ್ಷೆ ಹಾಗೂ ತಲಾ 5 ಸಾವಿರ ರೂ. ದಂಡ ವಿಧಿಸಿದೆ. ಎಸ್ಸಿ, ಎಸ್ಟಿ ವರ್ಗಕ್ಕೆ ಸೇರಿದ ಮೂವರು ಅಪರಾಧಿಗಳಿಗೆ ತಲಾ ಎರಡು ಸಾವಿರ ರೂ. ದಂಡ ಹಾಗೂ 5 ವರ್ಷ ಸಜೆ ವಿಧಿಸಿದೆ.

ಪ್ರಕರಣದ ವಿಚಾರಣೆ ನಡೆಸಿದ ಜಿಲ್ಲಾ ನ್ಯಾಯಾಧೀಶ ಚಂದ್ರಶೇಖರ್ ಸಿ., ಅ.21ರಂದು 101 ಆರೋಪಿಗಳ ವಿರುದ್ಧ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಅಪರಾಧಿಗಳೆಂದು ಘೋಷಿಸಿದ್ದರು. ಗುರುವಾರ ಶಿಕ್ಷೆ ಪ್ರಕಟಿಸಿ ಆದೇಶ ಹೊರಡಿಸಿದ್ದಾರೆ.

**ಪ್ರಕರಣದ ಹಿನ್ನೆಲೆ:** ಗಂಗಾವತಿ ತಾಲೂಕಿನ ಮರಕುಂಬಿಯಲ್ಲಿ 2014ರಲ್ಲಿ ದಲಿತರು ಮತ್ತು ಸವರ್ಣೀಯರ ನಡುವಿನ ಗಲಾಟೆ ದೇಶಾದ್ಯಂತ ಗಮನ ಸೆಳೆಯಲು ಕಾರಣವಾಗಿತ್ತು.



2014ರ ಆಗಸ್ಟ್ 28ರಂದು ಗಂಗಾವತಿ ನಗರದ ಶಿವ ಟಾಕೀಸ್‌ನಲ್ಲಿ 'ಪವರ್' ಸಿನಿಮಾ ವೀಕ್ಷಣೆಗೆ ತೆರಳಿದ್ದ ಮರುಕುಂಬಿ ಗ್ರಾಮದ ಸವರ್ಣೀಯ ಮಂಜುನಾಥ ಹಾಗೂ ಇತರರ ನಡುವೆ ಗಲಾಟೆ ನಡೆದಿತ್ತು. ಇದೇ ವಿಷಯಕ್ಕೆ ಗ್ರಾಮದಲ್ಲಿ ಸವರ್ಣೀಯರು ದಲಿತರ ಮೇಲೆ ಹಲ್ಲೆ ನಡೆಸಿ, ನಾಲ್ಕು ಗುಡಿಸಲಿಗೆ ಬೆಂಕಿ ಹಚ್ಚಿದ್ದರು.

ಈ ಕುರಿತು 117 ಜನರ ವಿರುದ್ಧ ಪ್ರಕರಣ ದಾಖಲಾಗಿತ್ತು. ಈ ಪೈಕಿ ಕೆಲವರು ಮರಣ ಹೊಂದಿದ್ದು, ಕೆಲವರ ಹೆಸರು ಪುನರಾವರ್ತನೆ ಆಗಿವೆ ಎನ್ನಲಾಗಿದೆ. ಬಾಕಿ 101 ಅಪರಾಧಿಗಳಿಗೆ ಶಿಕ್ಷೆ ವಿಧಿಸಲಾಗಿದೆ.

#### ಕಣ್ಣೀರಿಟ್ಟ ಕುಟುಂಬಸ್ಥರು

ಈ ಪ್ರಕರಣಕ್ಕೆ ಸಂಬಂಧಿಸಿ ಸತತ 10 ವರ್ಷ ವಿಚಾರಣೆ ನಡೆದಿದ್ದು, ಅ.21ರಂದು ಆರೋಪಿಗಳನ್ನು ಅಪರಾಧಿಗಳೆಂದು ಕೋರ್ಟ್ ತಿಳಿಸಿದೆ. ಗುರುವಾರ ಶಿಕ್ಷೆ ಪ್ರಮಾಣ ಘೋಷಣೆಯಾದ ಹಿನ್ನೆಲೆಯಲ್ಲಿ ಅಪರಾಧಿಗಳ ಕುಟುಂಬಸ್ಥರು ಅಪಾರ ಸಂಖ್ಯೆಯಲ್ಲಿ ಕೋರ್ಟ್‌ಗೆ ಆಗಮಿಸಿದ್ದರು. ಅಪರಾಧಿಗಳನ್ನು ಕರೆತಂದು ಮರಳಿ ಕರೆದುಕೊಂಡು ಹೋಗುವಾಗ ತಮ್ಮವರನ್ನು ಕಂಡು ಹೆತ್ತವರು ಕಣ್ಣೀರು ಹಾಕಿದರು.



### ಕ್ಯೂಆರ್ ಕೋಡ್ ಮೂಲಕ ನರೇಗಾ ಬೇಡಿಕೆ ಸಲ್ಲಿಸಲು ತಾಪಂ ಇಒ ಕೃಷ್ಣಪ್ಪ ಧರ್ಮರ ಕರೆ

# ಅಂಗೈಯಲ್ಲಿ ಉದ್ಯೋಗ ಖಾತ್ರಿ ಮಾಹಿತಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ (ನರೇಗಾ) ಯೋಜನೆಗೆ ಕ್ಯೂಆರ್ ಕೋಡ್ ಮೂಲಕ ಅಂಗೈಯಲ್ಲಿ ಉದ್ಯೋಗ ಖಾತ್ರಿ ಮಾಹಿತಿ ನೀಡುವ ಆಧುನಿಕತೆಯ ಟಚ್ ನೀಡಿ ಗ್ರಾಮೀಣ ಜನರಿಗೆ ಇನ್ನಷ್ಟು ಹತ್ತಿರವಾಗುವಂತೆ ಮಾಡಲಾಗಿದೆ ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ ಹೇಳಿದರು.

ಲಕ್ಷ್ಮೇಶ್ವರ ತಾ.ಪಂ ಸಭಾಭವನದಲ್ಲಿ ಹಮ್ಮಿಕೊಂಡಿದ್ದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ 'ಉದ್ಯೋಗ ಖಾತರಿ ನಡಿಗೆ ಸಬಲತೆಯೆಡೆಗೆ' ಅಭಿಯಾನದ ಕ್ಯೂಆರ್ ಕೋಡ್ ಒಳಗೊಂಡ ಮಾಹಿತಿ ಪತ್ರ ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಗ್ರಾಮೀಣ ಪ್ರದೇಶದ ಜನರಿಗೆ ತಮ್ಮ ಊರಿನಲ್ಲಿಯೇ ವರ್ಷದಲ್ಲಿ 100 ದಿನ ಕೆಲಸ ನೀಡಿ ಕುಟುಂಬ ನಿರ್ವಹಣೆಗೆ ಅನುಕೂಲ ಮಾಡಿಕೊಡುವುದರ ಜೊತೆಗೆ ಫಲಾನುಭವಿಗಳ ಜೀವನಾಧಾರಕ್ಕೆ ನೆರವಾಗುವ ವೈಯಕ್ತಿಕ ಕಾಮಗಾರಿಗಳಿಗೂ ಒತ್ತು ನೀಡುವ ಉದ್ದೇಶದಿಂದ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯವು ಕ್ಯೂಆರ್ ಕೋಡ್ ಒಳಗೊಂಡ ಮಾಹಿತಿ ಪತ್ರವನ್ನು ಪ್ರಚಾರಕ್ಕಾಗಿ ವಿತರಿಸಿದೆ. ಪಂಚಾಯತಿ ವ್ಯಾಪ್ತಿಯ ಗ್ರಾಮೀಣ ಜನರು ತಮ್ಮ ಮೊಬೈಲ್‌ನಲ್ಲಿ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡುವ ಮೂಲಕ ಉದ್ಯೋಗ ಖಾತ್ರಿ ಯೋಜನೆಯ ವೈಯಕ್ತಿಕ ಕಾಮಗಾರಿಗೆ ಬೇಡಿಕೆ ಸಲ್ಲಿಸಬಹುದಾಗಿದೆ ಎಂದರು.



ಈ ಬಗ್ಗೆ ಗ್ರಾಮ ಪಂಚಾಯತಿಯ ಜಿಕೆಎಂ ಮತ್ತು ಬಿಎಫ್‌ಟಿ ಸಹಿತಿ ಎಲ್ಲ ಹಂತದ ಗ್ರಾ.ಪಂ ಸಿಬ್ಬಂದಿಗಳು ಗ್ರಾ.ಪಂ ಕಚೇರಿ ಹಾಗೂ ಜನರು ಹೆಚ್ಚಾಗಿ ಸೇರುವ ಸಾರ್ವಜನಿಕ ಸ್ಥಳಗಳಲ್ಲಿ ಲಗತ್ತಿಸಿ ಹೆಚ್ಚು ಹೆಚ್ಚು ಜನರು ಬೇಡಿಕೆ ಸಲ್ಲಿಸುವಂತೆ ನೋಡಿಕೊಂಡು ಅಭಿಯಾನವನ್ನು ಯಶಸ್ವಿಗೊಳಿಸಬೇಕು ಎಂದರು.

> ರೈತರು ಸಾಮಾನ್ಯ ಬೆಳೆಗಳನ್ನು ಬೆಳೆಯುವ ಬದಲು ತೋಟಗಾರಿಕೆ ಬೆಳೆಗಳಾದ ಹೂ ಮತ್ತು ಹಣ್ಣು ಬೆಳೆಗೆ ಆದ್ಯತೆ ನೀಡಬೇಕು. ಇದರಿಂದಲೂ ರೈತರು ಉತ್ತಮ ಆದಾಯ ಪಡೆಯಬಹುದಾಗಿದೆ.
>
> **– ಕೃಷ್ಣಪ್ಪ ಧರ್ಮರ.**
> ಕಾರ್ಯನಿರ್ವಾಹಕ ಅಧಿಕಾರಿ.

ಪಿಡಿಒ ಬಿ.ಬಿ. ತಳವಾರ ಮಾತನಾಡಿ, ಉದ್ಯೋಗ ಖಾತ್ರಿ ಯೋಜನೆಯು ಬಡವರ ಕಲ್ಯಾಣಕ್ಕಾಗಿ ಇರುವ ಮಹತ್ವದ ಯೋಜನೆಯಾಗಿದೆ. ಗ್ರಾಮೀಣ ಭಾಗದವರು ಆರ್ಥಿಕವಾಗಿ ಮುಂದೆ ಬರಲು ಪೂರಕವಾಗಿದೆ ಎಂದರು.

ತಾಲೂಕು ಪಂಚಾಯಿತಿ ಅಧಿಕಾರಿಗಳಾದ ಶ್ರೀಕಾಂತ ಬಾಲೇಹೊಸೂರ, ಸುರೇಶ ಹಡಪದ, ಚಂದ್ರಶೇಖರ ಹಳ್ಳಿ, ಅರುಣ ತಂಬ್ರಳ್ಳಿ, ತಾ.ಪಂ ಸಿಬ್ಬಂದಿಗಳಾದ ಎಂ.ಬಿ. ಪಾಟೀಲ, ಮಧುಮತಿ ಪಾಟೀಲ, ಗಣೇಶ ಲಮಾಣಿ, ಗಣೇಶ ಸುಲಾಖೆ, ಸೋಮಶೇಖರ ತಳವಾರ ಇತರರು ಇದ್ದರು.

## ಹಾನಿಗೊಳಗಾದ ಮನೆಗಳಿಗೆ ಸಚಿವರ ಭೇಟಿ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಾರ್ಡ್ ನಂಬರ್ 30ರಲ್ಲಿ ಮಳೆ ಹಾನಿಗೊಳಗಾದ ಪ್ರದೇಶಗಳಿಗೆ ರಾಜ್ಯದ ಕಾನೂನು, ನ್ಯಾಯ ಮಾನವ ಹಕ್ಕುಗಳು ಸಂಸದೀಯ ವ್ಯವಹಾರಗಳು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಅವರು ಭೇಟಿ ನೀಡಿ ಪರಿಸ್ಥಿತಿಯನ್ನು ಅವಲೋಕಿಸಿ, ಶಾಶ್ವತ ಪರಿಹಾರ ಕಲ್ಪಿಸುವ ಕುರಿತು ಅಧಿಕಾರಿಗಳಿಗೆ ಸೂಚಿಸಿದರು.



ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ ಬಬರ್ಚಿ, ಪ್ರಭು ಬುರಬುರೆ, ವ್ಯಾಯವ್ಯ ಕರ್ನಾಟಕ ಸಾರಿಗೆ ಸಂಸ್ಥೆ ಉಪಾಧ್ಯಕ್ಷ ಪಿರಸಾಬ ಕೌತಾಳ, ಬಿ.ಬಿ. ಅಸೂಟಿ, ಉಪವಿಭಾಗಾಧಿಕಾರಿ ಗಂಗಪ್ಪ, ಗದಗ ತಹಸೀಲ್ದಾರ ಶ್ರೀನಿವಾಸ ಕುಲಕರ್ಣಿ, ಸ್ಲಂ ಬೋರ್ಡ್ ಅಧಿಕಾರಿಗಳು, ನಗರಸಭೆ ಅಧಿಕಾರಿಗಳು, ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ಬಸ್ ಪಲ್ಟಿ : ಮಹಿಳೆ ಸಾವು

■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ತಾಲೂಕಿನ ಸತ್ತೂರು ಗ್ರಾಮದ ಕೆರೆಯ ಬಳಿ ಗುರುವಾರ ಸಂಜೆ 4.30 ಸುಮಾರಿಗೆ ಕೆಎಸ್‌ಆರ್‌ಟಿಸಿ ಬಸ್ ಪಲ್ಟಿಯಾಗಿ ಓರ್ವ ಮಹಿಳೆ ಸಾವನ್ನಪ್ಪಿದ ಘಟನೆ ವರದಿಯಾಗಿದೆ.

ಸತ್ತೂರು ಕೆರೆಯ ಎಡಬದಿಯಲ್ಲಿ ನೂತನ ಸಿಸಿ ರಸ್ತೆಯ ಕಾಮಗಾರಿ ನಡೆಯುತ್ತಿದ್ದು, ಚಾಲಕ ನಿರ್ಲಕ್ಷ್ಯದಿಂದ ಬಸ್ ಚಲಾಯಿಸಿದ್ದರಿಂದ ಪಕ್ಕದಲ್ಲಿನ ಕಂದಕಕ್ಕೆ ಬಸ್ ಉರುಳಿದೆ. ಈ ಅಪಘಾತದಲ್ಲಿ ಕರಿಬಸಪ್ಪನವರ ಹನುಮಕ್ಕ (40) ಎಂಬುವರಿಗೆ ಬಲವಾದ ಪೆಟ್ಟು ಬಿದ್ದು ಸ್ಥಳದಲ್ಲಿಯೇ ಮೃತಳಾಗಿದ್ದಾಳೆ. ಉಳಿದಂತೆ 15 ಜನರಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ದಾವಣಗೆರೆ ಚಿಗಟೇರಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಸಿಪಿಐ ನಾಗರಾಜ್ ಕಮ್ಮಾರ್, ಅರಸೀಕೆರೆ ಪಿಎಸ್‌ಐ ಕೆ. ರಂಗಯ್ಯ ಹಾಗೂ ಪೊಲೀಸ್ ಸಿಬ್ಬಂದಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.



### ಬೆಳೆಗಳನ್ನು ರಕ್ಷಿಸಲು ಡ್ರೋಣ್ ಮೊರೆ ಹೋಗುತ್ತಿರುವ ರೈತ ವರ್ಗ

## ಶ್ರಮ, ಸಮಯ ಉಳಿಸುವ ಮಾರ್ಗ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಸಾಲ–ಶೂಲ ಮಾಡಿ ಬಿತ್ತನೆ ಕೈಗೊಂಡು, ಫಸಲು ಕೈಗೆಟಕುವ ಸಂದರ್ಭದಲ್ಲಿ ಅನೇಕ ಸಂಕಷ್ಟಗಳನ್ನು ಎದುರಿಸುತ್ತಿರುವ ರೈತ ವರ್ಗವು ಇದೀಗ ಆಧುನಿಕ ತಂತ್ರಜ್ಞಾನವನ್ನು ಬಳಸಿಕೊಂಡು ಕೃಷಿಯಲ್ಲಿ ಮುನ್ನಡೆಯುತ್ತಿರುವುದು ಹೆಮ್ಮೆಯ ಸಂಗತಿ. ಇತ್ತೀಚೆಗೆ ಶಿರಹಟ್ಟಿ ತಾಲೂಕಿನ ಹೊಸೂರ ಗ್ರಾಮದಲ್ಲಿ ರೈತರೊಬ್ಬರು ತಮ್ಮ ಜಮೀನಿನಲ್ಲಿ ಡ್ರೋಣ್ ಬಳಸಿಕೊಂಡು ಔಷಧಿ ಸಿಂಪರಣೆ ಮಾಡಿ ಗಮನ ಸೆಳೆದಿದ್ದಾರೆ.

ಶಿರಹಟ್ಟಿ ತಾಲೂಕಿನ ಹೊಸೂರ ಗ್ರಾಮದ ರಾಜು ಪಾಟೀಲ ಎಂಬುವರು ತಮ್ಮ ಜಮೀನಿನಲ್ಲಿ ಬೆಳೆಯಲಾಗಿದ್ದ 10 ಎಕರೆ ಪ್ರದೇಶದ ತೊಗರಿ ಬೆಳೆ, 5 ಎಕರೆ ಪ್ರದೇಶದ ಶೇಂಗಾ ಬೆಳೆ, 8 ಎಕರೆ ಪ್ರದೇಶದ ಅಲಸಂದಿ ಬೆಳೆಗಳಿಗೆ ಡ್ರೋಣ್ ಬಳಸಿಕೊಂಡು ಔಷಧಿ ಸಿಂಪರಣೆಯನ್ನು ಮಾಡಿದ್ದಾರೆ.



ಈ ಕುರಿತು ಪ್ರತಿಕ್ರಿಯಿಸಿದ ವಡವಿ ಗ್ರಾಮದ ಪ್ರಗತಿಪರ ರೈತ ರಾಜು ಪಾಟೀಲ, ಡ್ರೋಣ್ ಬಳಸಿ ಔಷಧ ಸಿಂಪರಣೆ ಮಾಡುವುದರಿಂದ ಬೆಳೆಗಳ ಎಲೆಗಳಿಗೆ ನೇರವಾಗಿ ಔಷಧ ಸಿಂಪರಣೆಯಾಗಲಿದೆ. ಸಮಯದ ಉಳಿತಾಯ, ಜೊತೆಗೆ ಪ್ರಕೃತಿ ವಿಕೋಪದಿಂದ ತ್ವರಿತ ಗತಿಯಲ್ಲಿ ಬೆಳೆಗಳನ್ನು ರಕ್ಷಿಸಿಕೊಳ್ಳಲು ಸಹಕಾರಿಯಾಗಿದೆ ಎಂದರು.

ಪ್ರತಿ ಎಕರೆಗೆ ಡ್ರೋಣ್ ಬಳಕೆ ಮಾಡುವುದಕ್ಕೆ 300ರೂ. ನೀಡಿದ್ದು 10–15 ನಿಮಿಷದಲ್ಲಿ ಒಂದು ಎಕರೆ ಪ್ರದೇಶಕ್ಕೆ ಔಷಧಿ ಸಿಂಪರಣೆ ಮಾಡುವ ಸಾಮರ್ಥ್ಯ ಡ್ರೋಣ್‌ಗಿದೆ. ಇದರಿಂದ ಸಾಕಷ್ಟು ಸಮಯ ಉಳಿತಾಯವಾಗುವುದರ ಜೊತೆಗೆ ಕೂಲಿಕಾರ್ಮಿಕರ ಸಮಸ್ಯೆಯಿರುವ ಸ್ಥಳಗಳಲ್ಲಿ ರೈತರಿಗೆ ಇದು ಉಪಯೋಗವಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಡ್ರೋಣ್ ಬಳಸಿಕೊಂಡು ಔಷಧ ಸಿಂಪರಣೆ ಮಾಡುವುದರಿಂದ ಔಷಧವು ಮೇಲಿನಿಂದ ಕೆಳಕ್ಕೆ ಬೆಳೆಗಳಿಗೆ ಸಂಪೂರ್ಣವಾಗಿ ಸಿಂಪರಣೆಯಾಗಲಿದ್ದು, ತ್ವರಿತ ಗತಿಯಲ್ಲಿ ಬೆಳೆಗಳಿಗೆ ಆಗುವ ಹಾನಿಯನ್ನು ತಪ್ಪಿಸಬಹುದು. ಜೊತೆಗೆ ಸಮಯದ ಉಳಿತಾಯವಾಗಲಿದೆ. ಆಗಿಂದಾಗ್ಗೆ ಆಗುವ ಪ್ರಕೃತಿ ವಿಕೋಪವನ್ನು ಗಮನದಲ್ಲಿಟ್ಟುಕೊಂಡು ಮುಂಜಾಗೃತೆಯಾಗಿ ಬೆಳೆಗಳನ್ನು ರಕ್ಷಿಸಿಕೊಳ್ಳಲು ಸಹಕಾರಿಯಾಗಲಿದೆ.

ರೈತಾಪಿ ವರ್ಗವು ಬಿತ್ತನೆ ಮಾಡಿದ ನಂತರ ಬೆಳೆಗಳನ್ನು ರಕ್ಷಿಸಿಕೊಳ್ಳುವುದು ಸಹ ಅಷ್ಟೇ ಪ್ರಮುಖವಾಗಿದ್ದು, ಕಾಲ ಬದಲಾದಂತೆ ಆಧುನಿಕ ಕೃಷಿ ಪದ್ಧತಿಯನ್ನು ಅಳವಡಿಸಿಕೊಂಡು ತಮ್ಮ ಬೆಳೆಗಳನ್ನು ರಕ್ಷಿಸಿಕೊಳ್ಳಲು ವಹಿಸಬೇಕಾದ ಮುಂಜಾಗೃತಾ ಕ್ರಮಗಳನ್ನು ಅನುಸರಿಸಿ ಬೆಳೆಗಳ ರಕ್ಷಣೆಗೆ ಮುಂದಾಗುವುದು ಅವಶ್ಯವಿದೆ.

# ಎಚ್.ಕೆ. ಪಾಟೀಲರಿಂದ ಅಂಬುಲೆನ್ಸ್ ಲೋಕಾರ್ಪಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ನಗರದ ಕಾಟನ್ ಸೇಲ್ಸ್ ಸೊಸೈಟಿಯ ಆವರಣದಲ್ಲಿ ಗುರುವಾರ ಕರ್ನಾಟಕ ರಾಜ್ಯ ಔಕಾಫ್ ಮಂಡಳಿಯ ಅಂಬುಲೆನ್ಸ್‌ನ್ನು ರಾಜ್ಯದ ಕಾನೂನು, ನ್ಯಾಯ, ಮಾನನ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ



ಸಚಿವರಾದ ಡಾ. ಎಚ್.ಕೆ. ಪಾಟೀಲ ಲೋಕಾರ್ಪಣೆಗೊಳಿಸಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ ಬಬರ್ಚಿ, ವಾಯವ್ಯ ಕರ್ನಾಟಕ ಸಾರಿಗೆ ಸಂಸ್ಥೆಯ ಉಪಾಧ್ಯಕ್ಷ ಪಿರಸಾಬ ಕೌತಾಳ, ಅಶೋಕ ಮಂದಾಲಿ ಸೇರಿದಂತೆ ಗಣ್ಯರು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಅಕ್ಟೋಬರ್ 25 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 21, 22 ವಿಜಯನಗರ ಶಾಲೆ, ಕರುಗಲ್ ಲೇಔಟ್, ಕಮತರ ಪ್ಲಾಟ್, ವಾಲ್ಮೀಕಿ ಭವನ, ಟವರ್ ಕಂಭ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 34 ವಿಶ್ವೇಶ್ವರಯ್ಯ ನಗರ, ಸೇವಾಲಾಲ ನಗರ, ಬಾಪೂಜಿ ನಗರ, ಬ್ಯಾಂಕ್ ಸುತ್ತಮುತ್ತಲಿನ ಲೈನ್‌ಗಳು,

ವಾರ್ಡ್ ನಂ.31 – ಸರಾಫ್ ಬಜಾರ್, ಮಾಬುಸುಬಾನಿ ಕಟ್ಟಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 10, 8, 9 – ಹೆಲ್ತ್ ಕ್ಯಾಂಪ್, ಪೊಲೀಸ್ ಕ್ವಾರ್ಟರ್ಸ್, ಶಿರಹಟ್ಟಿ ಓಣಿ, ಕುರಹಟ್ಟಿ ಪೇಟೆ, ಕಬಾಡೆ ರಸ್ತೆ, ಗ್ಲಾಸ್ ಹೌಸ್ ಶಾಲೆಯ ಹಿಂದಿನ ಭಾಗ ಪೊಲೀಸ್ ಸ್ಟೇಷನ್, ಕ್ವಾರ್ಟರ್ಸ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 23, 21 ಭೂಮಾ, ಗುಳಗುಂದಿ, ಮೇರವಾಡೆ ಸಂದಿ, ಚನ್ನಪ್ಪ ಲೈನ್, ಹೊಸಲೈನ್, ರಾಮದಾಸ, ಮುನವಳ್ಳಿ, ಅಕ್ಕಿಪ್ಲಾಟ್, ಕಮತರ ಪ್ಲಾಟ್, ಎಲಿಗಾರ ಪ್ಲಾಟ್, ಉಳಿದ ಕೆಲವು ಭಾಗಗಳು, ವಾರ್ಡ್ ನಂ. 12ರಲ್ಲಿ ಪಿ.&ಟಿ. ಕ್ವಾರ್ಟರ್ಸ್, ಸಾಯಿನಾಥ್ ಮಂದಿರದ ಭಾಗಗಳು ವಾರ್ಡ್ ನಂ. 16,18,19,20 ಕಾಗದಗೇರಿ ಭಾಗ-1,ಭಾಗ-2, ಗುಂಜೀನವರ ಭಟ್ಟಿ, ಮೀನದ ಮಾರ್ಕೆಟ್, ಬಳಿಗಾರ, ವಿ.ಎನ್.ಟಿ. ರಸ್ತೆ, ಚವ್ಹಾಣದವರ ಮನೆ ಲೈನ್, ಮದ್ಲಿ ಓಣಿ, ಹಾವನೂರ, ಬಾವಿಯವರ, ದುರಗಮ್ಮನಗುಡಿ ಭಾಗ-1, ಭಾಗ-2, ನಮಾಜಿಯವರ ಲೈನ್, ಮಣ್ಣಮ್ಮನವರ ಲೈನ್ ಉಳಿದ ಕೆಲವು ಭಾಗಗಳು

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಧಿಕಾರಿಯ ದೌರ್ಜನ್ಯ ಖಂಡಿಸಿ ಧರಣಿ




■ವಿಜಯಸಾಕ್ಷಿ ಸುದ್ದಿ, ಗಂಗಾವತಿ

ಇಲ್ಲಿನ ವೆಂಕಟಗಿರಿ ಹೋಬಳಿ ವ್ಯಾಪ್ತಿಯ ವಡ್ಡರಹಟ್ಟಿ ಗ್ರಾಮದ ಸರ್ವೆ ನಂ 48/02ರ 29 ಗುಂಟೆ ಜಮೀನಿಗೆ ಹೋಗುವ ರಸ್ತೆ ಬಂದ್ ಮಾಡಿ ಜಮೀನಿನಲ್ಲಿ ಹಾಕಿರುವ ಶೆಡ್ ಕಿತ್ತು ಹಾಕುವ ಮೂಲಕ ಜಿಲ್ಲಾ ಕೃಷಿ ತರಬೇತಿ ಅಧಿಕಾರಿ ದೌರ್ಜನ್ಯ ಎಸಗಿದ್ದು, ಕೂಡಲೇ ಕ್ರಮ ಕೈಗೊಳ್ಳುವ ಮೂಲಕ ನಮ್ಮ ಜಮೀನಿನ ರಸ್ತೆ ಬಿಟ್ಟುಕೊಡಬೇಕು ಎಂದು ಅಗ್ರಹಿಸಿ ನಗರದ ತಹಸೀಲ್ದಾರ ಕಚೇರಿ ಮುಂಭಾಗದಲ್ಲಿ ಸಿಕ್ಕಲಗಾರ ಕುಟುಂಬದ ಸದಸ್ಯರು ಪ್ರತಿಭಟನೆ ನಡೆಸಿದರು.

ಈ ಕುರಿತು ಪ್ರಮುಖರಾದ ಜಾಕೀರ್ ಮಾತನಾಡಿ, ಸ್ವಾತಂತ್ರ್ಯ ಪೂರ್ವದಲ್ಲಿ ಸುಮಾರು 28 ಎಕರೆ ಖರೀದಿ ಮಾಡಲಾಗಿತ್ತು. ಮೈಸೂರು ರಾಜ್ಯವಿದ್ದ ಸಂದರ್ಭದಲ್ಲಿ 17 ಎಕರೆ ಪಿಡಬ್ಲ್ಯೂಡಿ, ನೀರಾವರಿ ಹಾಗು ಕೃಷಿ ಇಲಾಖೆಗಾಗಿ ಭೂಸ್ವಾಧೀನ ಮಾಡಿಕೊಳ್ಳಲಾಗಿತ್ತು. ಇದೇ ಜಮೀನಿನ 7 ಎಕರೆಯಲ್ಲಿ ಕೆಲ ವಲಸಿಗರು ಗುಡಿಸಲು ಹಾಕಿಕೊಂಡಿದ್ದು ನ್ಯಾಯಾಲಯದಲ್ಲಿ ಅವರ ವಿರುದ್ಧ ತೀರ್ಪು ಬಂದಿದೆ. ಆದರೆ ತಹಸೀಲ್ದಾರರು ತೆರವುಗೊಳಿಸುತ್ತಿಲ್ಲ. ನಮ್ಮ ಉಳಿದ ಜಮೀನನ್ನು ಕೃಷಿ ಇಲಾಖೆ ಕಬಳಿಸಿತ್ತು. ಪರಿಶೀಲಿಸಿ 2017ರಲ್ಲಿ ನಮ್ಮ ಸುರ್ಪರ್ದಿಗೆ ನೀಡಿದ್ದರೂ ಕೃಷಿ ತರಬೇತಿ ಇಲಾಖೆಯ ಅಧಿಕಾರಿ ದೌರ್ಜನ್ಯದ ಮೂಲಕ ನಮ್ಮದೇ ಜಮೀನಿನಲ್ಲಿರುವ ರಸ್ತೆ ಬಂದ್ ಮಾಡಿ ಉದ್ಧಟತನ ಮೆರೆಯುತ್ತಿದ್ದಾರೆ. ಮೇಲಾಧಿಕಾರಿಗಳು ಕ್ರಮಕ್ಕೆ ಮುಂದಾಗಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಕುಟುಂಬದ ಸದಸ್ಯರಾದ ಮೈನುದ್ದೀನ್, ಷಹನಾಜ್, ಅಸ್ಲಾಂ, ಜುಬೇದಾ ಹಾಗು ಯಾಫ್ರೀನ್ ಇತರರಿದ್ದರು.

# ಬೆಳಗಾವಿ ಅಧ್ಯಕ್ಷರಾಗಿ ಶರಣು ಗೋಡಿ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ



ಶರಣು ಎಸ್.ಗೋಡಿಯವರ ಸಾಮಾಜಿಕ ಸೇವೆಯನ್ನು ಪರಿಗಣಿಸಿ ತಾಯಿ ಶ್ರೀ ಭುವನೇಶ್ವರಿಯ ಹಾಗೂ ಈ ನಾಡಿನ ಸೇವೆಯನ್ನು ಮಾಡಲು ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆ ಬೆಳಗಾವಿ ವಿಭಾಗದ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿ ರಾಜ್ಯಾಧ್ಯಕ್ಷರಾದ ನಿಂಗರಾಜಗೌಡ ಆದೇಶ ಹೊರಡಿಸಿದ್ದಾರೆ ಎಂದು ವೇದಿಕೆಯ ಪ್ರಕಟಣೆ ತಿಳಿಸಿದೆ.

# ಮಹಿಳೆಯರು ಸ್ವಾವಲಂಬಿಗಳಾಗಿ



■ವಿಜಯಸಾಕ್ಷಿ ಸುದ್ದಿ, ಗದಗ

ಮಹಿಳೆಯರು ಸ್ವ ಉದ್ಯೋಗದಿಂದ ಸ್ವಾವಲಂಬಿಗಳಾಗಿ ತಮ್ಮ ಕಾಲ ಮೇಲೆ ನಿಲ್ಲುವಂತಾಗಬೇಕು ಎಂದು ನಿವೃತ್ತ ಪ್ರಾಚಾರ್ಯೆ ಪ್ರೊ. ಕವಿತಾ ಕಾಶಪ್ಪನವರ ಹೇಳಿದರು.

ಕರ್ನಾಟಕ ಕುರುಬರ ಮಹಿಳಾ ಸಂಘವನ್ನು ಉದ್ಘಾಟಿಸಿ ಮಾತನಾಡಿದ ಅವರು, ಈ ಸಂಘದಿಂದ ಅನೇಕ ಉತ್ತಮೋತ್ತಮ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ. ಸರಕಾರದಿಂದ ಸಿಗುವ ಸೌಲಭ್ಯಗಳನ್ನು ಉಪಯೋಗಿಸಿಕೊಂಡು ನೂರಾರು ಮಹಿಳೆಯರಿಗೆ ಉದ್ಯೋಗ ದೊರಕಿಸಿಕೊಡುವ ಯೋಜನೆ ಈ ಸಂಘ ಹೊಂದಿದೆ.

ಹೊಂಬಳ ಗ್ರಾಮದ ಶಿಲ್ಪಾ ಹಂಡಿಯವರು ರೊಟ್ಟಿ ಮಾಡುವ ಯಂತ್ರದ ಸಹಾಯದಿಂದ ದಿನಕ್ಕೆ ಸಾವಿರಾರು ರೊಟ್ಟಿಗಳನ್ನು ಮಾಡತ್ತಿರುವುದು ನಿಜಕ್ಕೂ ಶ್ಲಾಘನೀಯ ಕಾರ್ಯವಾಗಿದೆ ಎಂದರು.

ವೇದಿಕೆ ಮೇಲೆ ಗಂಗಾ ಚಕ್ರಣ್ಣವರ, ವಿಜಯಲಕ್ಷ್ಮೀ ಅನವಾಲದ, ಶ್ವೇತಾ ಕಾಶಪ್ಪನವರ, ಶಿಲ್ಪಾ ಹಂಡಿ ಮುಂತಾದವರು ಉಪಸ್ಥಿತರಿದ್ದರು. ಕನಕದಾಸರ ಕೀರ್ತನೆಯೊಂದಿಗೆ ಪ್ರಾರಂಭವಾದ ಕಾರ್ಯಕ್ರಮದಲ್ಲಿ ಗಂಗಾ ಚಕ್ರಣ್ಣವರ ವಂದಿಸಿದರು.

# ಛಬ್ಬಿ ಗ್ರಾ.ಪಂ ಅಧ್ಯಕ್ಷ-ಉಪಾಧ್ಯಕ್ಷರ ಅವಿರೋಧ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಗುರುವಾರ ಶಿರಹಟ್ಟಿ ತಾಲೂಕಿನ ಛಬ್ಬಿ ಗ್ರಾ.ಪಂನಲ್ಲಿ ಕೊನೆಯ ಅವಧಿಗೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷೆಯಾಗಿ ಸೋಮವ್ವ ಹನುಮಂತಪ್ಪ ಲಮಾಣಿ ಹಾಗೂ ಉಪಾಧ್ಯಕ್ಷರಾಗಿ ರಮೇಶ ಖೀರಪ್ಪ ಲಮಾಣಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾ ಅಧಿಕಾರಿ ಹಾಗೂ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಎಸ್. ಕಲ್ಮನಿ ಘೋಷಿಸಿದರು.

ಒಟ್ಟು 11 ಜನ ಸದಸ್ಯ ಬಲ ಹೊಂದಿರುವ ಗ್ರಾ.ಪಂನ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಗಳಿಗೆ ಒಬ್ಬೊಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದ ಯಾವುದೇ ಪೈಪೋಟಿಯಿಲ್ಲದೆ ಅವಿರೋಧವಾಗಿ ಆಯ್ಕೆ ಮಾಡಲಾಯಿತು. ಛಬ್ಬಿ ಪಂಚಾಯಿತಿ ವ್ಯಾಪ್ತಿಗೆ ಗುಡ್ಡದಪೂರ, ವರವಿ, ಛಬ್ಬಿ ಹಾಗೂ ಛಬ್ಬಿ ತಾಂಡೆ ಬರುತ್ತಿದ್ದು, ಕಾಂಗ್ರೆಸ್ ಬೆಂಬಲಿತರು ಅಧ್ಯಕ್ಷ, ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ನೂತನ ಅಧ್ಯಕ್ಷೆ ಸೋಮವ್ವ ಹನಮಂತಪ್ಪ ಲಮಾಣಿ ಮಾತನಾಡಿ, ಗ್ರಾಮೀಣ ಪ್ರದೇಶದಲ್ಲಿ ರಸ್ತೆ, ಚರಂಡಿ, ಕುಡಿಯುನ ನೀರು, ವಿದ್ಯುತ್ ದೀಪ ಸೇರಿದಂತೆ ಸರಕಾರ ಎಲ್ಲ ರೀತಿಯ ಸೌಲಭ್ಯಗಳನ್ನು ಒದಗಿಸುತ್ತಿದ್ದು, ಛಬ್ಬಿ ಗ್ರಾ.ಪಂ ವ್ಯಾಪ್ತಿಯ ಗ್ರಾಮಗಳಲ್ಲಿ ಸೌಲಭ್ಯ ಕಲ್ಪಿಸಿಕೊಡುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದರು.

ತಾ.ಪಂ ಮಾಜಿ ಸದಸ್ಯ ದೇವಪ್ಪ ಲಮಾಣಿ, ಗ್ರಾ.ಪಂ ಸದಸ್ಯರಾದ ಶ್ರೀಕಾಂತ ಗಾಳಿ, ಕೇಶವ ಕಾಳಪ್ಪ ಅಂಗಡಿ, ಸುವರ್ಣವ್ವ ಆರಿ, ರೇಣುಕಾ ತಿಮ್ಮಿಶೆಟ್ಟರ್, ದುರ್ಗಪ್ಪ ಪೋತರಾಜ ಹಾಗೂ ಗ್ರಾಮದ ಹಿರಿಯರಾದ ಹನುಮಂತ ಲಮಾಣಿ, ಚೋಕ್ಲಪ್ಪ ರಾಠೋಡ, ಈರಣ್ಣ ಚವ್ಹಾಣ, ದೇವು ನಾಯಕ್, ಹೇಮಲಪ್ಪ ಲಮಾಣಿ, ಪಿಡಿಒ ಎಂ.ಎಸ್. ಜಾವೂರ, ತಾ.ಪಂ ಸಿಬ್ಬಂದಿ ಅಶೋಕ ಧನವೆ ಮುಂತಾದವರು ಉಪಸ್ಥಿತರಿದ್ದರು.



## ಕಣ್ಣೀರ ಭಾವಿ ಸ್ಮಾರಕ ಅಭಿವೃದ್ಧಿಗೆ ವಿಶೇಷ ಅನುದಾನಕ್ಕೆ ಮನವಿ: ಸಿದ್ಧಲಿಂಗೇಶ್ವರ ಪಾಟೀಲ

# ಸ್ಮಾರಕಗಳ ಸಂರಕ್ಷಣಾ ಕಾಮಗಾರಿಗೆ ವೇಗ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಅರಕ್ಷಿತ ಸ್ಮಾರಕಗಳ ಸಂರಕ್ಷಣೆ ಕಾಮಗಾರಿಯು ಆರಂಭವಾಗಿ ವೇಗ ಪಡೆದುಕೊಂಡಿದ್ದು, ವಿವಿಧ ಗಲ್ಲಿಗಳಲ್ಲಿರುವ 13 ಸ್ಮಾರಕಗಳ ಕಾಮಗಾರಿಯು ಡಿಸೆಂಬರ್ ಅಂತ್ಯಕ್ಕೆ ಪೂರ್ಣಗೊಂಡು ಪ್ರವಾಸಿಗರನ್ನು ಆಕರ್ಷಿಸಲಿದೆ ಎಂದು ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ರಾಜ್ಯ ಸದಸ್ಯ ಸಿದ್ಧಲಿಂಗೇಶ್ವರ ಪಾಟೀಲ ತಿಳಿಸಿದರು.

ಅರಕ್ಷಿತ ಸ್ಮಾರಕಗಳ ಕಾಮಗಾರಿ ನಡೆದ ಸ್ಥಳ ವೀಕ್ಷಣೆ ಮಾಡಿ ಮಾತನಾಡಿದ ಅವರು, ಕಳೆದ ಸೆ.8ರಂದು ಸ್ಮಾರಕಗಳ ಸಂರಕ್ಷಣೆ ಕಾಮಗಾರಿಗೆ 5 ಕೋಟಿ ರೂ ವೆಚ್ಚದಲ್ಲಿ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಚಾಲನೆ ನೀಡಿದರು. ಗ್ರಾಮದ ಹಾಲಗೊಂಡ ಬಸವೇಶ್ವರ ದೇವಸ್ಥಾನದ ಹತ್ತಿರವಿರುವ ಮಜ್ಜನಭಾವಿ ಸಂರಕ್ಷಣಾ ಅಭಿವೃದ್ಧಿ ಕಾಮಗಾರಿಯನ್ನು ಆರಂಭಿಸಲಾಯಿತು. ನಂತರ ಕಲ್ಮಠ, ಕಣ್ಣೀರ ಭಾವಿ, ಮಲ್ಲಿಕಾರ್ಜುನ, ಲೆಕ್ಕದ ವೀರೇಶ್ವರ, ಈಶ್ವರ ಗುಡಿ, ನೀಲಕಂಠೇಶ್ವರ ಸಂರಕ್ಷಣಾ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದೆ. ಈಗಾಗಲೇ ಶೇ.30ರಷ್ಟು ಕಾಮಗಾರಿ ನಡೆದಿದೆ.



ಮೂಲವಾಗಿ ನಿರ್ಮಾಣವಾಗಿರುವ ಕಲಾಕೃತಿಗಳಿಗೆ ಯಾವುದೇ ಧಕ್ಕೆ ಬಾರದಂತೆ ಕಾಮಗಾರಿಗಳನ್ನು ನಡೆಸಲಾಗುತ್ತಿದೆ. ಕಲ್ಯಾಣಿಗಳಲ್ಲಿ ಮಲಿನಗೊಂಡಿರುವ ನೀರನ್ನು ಹೊರ ಹಾಕಿ ಪ್ರವಾಸಿಗರಿಗೆ ಆಕರ್ಷಣೀಯವಾಗಿ ಕಾಣುವಂತೆ ಮಾಡಲಾಗುತ್ತಿದ್ದು, ಈ ವರ್ಷದ ಡಿಸೆಂಬರ್ ಅಂತ್ಯಕ್ಕೆ ಕಾಮಗಾರಿ ಪೂರ್ಣಗೊಳ್ಳಲಿದೆ. ಇನ್ನೂ ವಿಶೇಷವಾಗಿ ಬ್ರಹ್ಮ ಜಿನಾಲಯ ಹತ್ತಿರದ ಪ್ರಾಚ್ಯ ವಸ್ತು ಸಂಗ್ರಾಲಯದ ಮುಂದೆ ಇರುವ ಕಣ್ಣೀರ ಭಾವಿ(ಕಲ್ಯಾಣಿ)ಅಭಿವೃದ್ಧಿಗಾಗಿ ಈಗ ಮಂಜೂರು ಆಗಿರುವ ಅನುದಾನದ ಜತೆಗೆ ಇನ್ನೂ 1.5 ಕೋಟಿ ರೂ. ವಿಶೇಷ ಅನುದಾನವನ್ನು ಮೈಸೂರು ಪುರಾತತ್ವ ಇಲಾಖೆಯಿಂದ ಮಂಜೂರು ಮಾಡಿಸಲು ಪ್ರವಾಸೋದ್ಯಮ ಸಚಿವರಾದ ಎಚ್.ಕೆ. ಪಾಟೀಲ ಅವರಿಗೆ ವಿನಂತಿಸಲಾಗಿದೆ.

ಗ್ರಾಮದಲ್ಲಿ ಐತಿಹಾಸಿಕವಾದ ಕೋಟೆ ಗೋಡೆಗಳು ಸಹ ಇದ್ದು, ಅವುಗಳನ್ನು ಸಂರಕ್ಷಣೆ ಮಾಡುವ ಉದ್ದೇಶವನ್ನು ರಾಜ್ಯ ಪುರಾತತ್ವ ಇಲಾಖೆ ಹೊಂದಿದ್ದು, ಗ್ರಾಮಸ್ಥರು ಸಹಕಾರ ನೀಡಬೇಕು ಎಂದು ಸಿದ್ಧಲಿಂಗೇಶ್ವರ ಪಾಟೀಲ ತಿಳಿಸಿದರು. ಈ ಸಂದರ್ಭದಲ್ಲಿ ಪ್ರಾಧಿಕಾರದ ಆಯುಕ್ತ ಡಾ. ಶರಣು ಗೋಗೇರಿ, ಧಾರವಾಡದ ಪುರಾತತ್ವ ಸಂಗ್ರಾಲಯಗಳು ಮತ್ತು ಪರಂಪರೆಯ ಇಂಜಿನಿಯರ್ ವಿಭಾಗದ ಪುರಾತತ್ವ ಸಂರಕ್ಷಣಾ ಸಹಾಯಕಿ ಸುವರ್ಣ ಕ್ಷೀರಸಾಗರ, ಪ್ರಾಧಿಕಾರದ ಸದಸ್ಯ ಅ.ದ. ಕಟ್ಟಿಮನಿ ಇದ್ದರು.

> ಖ್ಯಾತ ಇತಿಹಾಸ ತಜ್ಞರಾದ ಗೀತಾಂಜಲಿರಾವ್ ಅವರ ನೇತೃತ್ವದಲ್ಲಿ ಲಕ್ಕುಂಡಿಯ ಸಮಗ್ರ ಸ್ಮಾರಕಗಳ ಅಭಿವೃದ್ಧಿಯ ಬಗ್ಗೆ ಕೆಲವೇ ದಿನಗಳಲ್ಲಿ ವರದಿಯನ್ನು ಸಲ್ಲಿಸಲಿದ್ದಾರೆ. ವರದಿಯ ಆಧಾರದ ಮೇಲೆ ಹಂತ ಹಂತವಾಗಿ ಲಕ್ಕುಂಡಿ ಗ್ರಾಮವು ವಿಶ್ವ ಪಾರಂಪರಿಕ ಪಟ್ಟಿಯ ಸ್ಥಾನವನ್ನು ಪಡೆಯುವ ನಿಟ್ಟಿನಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗುವುದು.
>
> **– ಸಿದ್ಧಲಿಂಗೇಶ್ವರ ಪಾಟೀಲ.**
> ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ರಾಜ್ಯ ಸದಸ್ಯ.

# ಚನ್ನಮ್ಮಳ ದೇಶಪ್ರೇಮ ಆದರ್ಶವಾಗಲಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಈ ನಾಡಿನ ಸ್ವಾತಂತ್ರ್ಯ ಹೋರಾಟಕ್ಕೆ ನಾಂದಿ ಹಾಡಿದ ಕೀರ್ತಿ ವೀರರಾಣಿ ಕಿತ್ತೂರು ಚನ್ನಮ್ಮಳಿಗೆ ಸಲ್ಲುತ್ತದೆ, ಅವರ ಕೆಚ್ಚೆದೆಯ ಹೋರಾಟದಿಂದ ಬ್ರಿಟಿಷರನ್ನು ಅಲುಗಾಡಿಸಿದ್ದರು. ಅಂತಹ ಧೀರ ಮಹಿಳೆಯನ್ನು ಸ್ಮರಿಸುವದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಗ್ರೇಡ್ 2 ತಹಸೀಲ್ದಾರ ಮಂಜುನಾಥ ಅಮಾಸಿ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ತಹಸೀಲ್ದಾರ ಕಚೇರಿಯಲ್ಲಿ ಕಿತ್ತೂರರಾಣಿ ಚನ್ನಮ್ಮಳ ವಿಜಯೋತ್ಸವ, ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಚನ್ನಮ್ಮಳ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು. ವೀರರಾಣಿ ಕಿತ್ತೂರು ಚನ್ನಮ್ಮ ಕನ್ನಡ ನಾಡಿನ ಹೆಮ್ಮೆ. ಚನ್ನಮ್ಮಳ ದೇಶಪ್ರೇಮ, ಶೌರ್ಯ, ಸಾಹಸ ಇಂದಿನ ಯುವ ಪೀಳಿಗೆಗೆ ಆದರ್ಶವಾಗಬೇಕು ಎಂದರು.

ಈ ಸಂದರ್ಭದಲ್ಲಿ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ತಾಲೂಕಾಧ್ಯಕ್ಷ ಮಂಜುನಾಥ ಮಾಗಡಿ, ಚಂಬಣ್ಣ ಬಾಳಿಕಾಯಿ, ರಾಜು ಲಿಂಬಿಕಾಯಿ, ಮಹಾದೇವಪ್ಪ ಅಣ್ಣಿಗೇರಿ, ಈರಣ್ಣ ಕಟಗಿ, ಚಂದ್ರು ಮಾಗಡಿ, ಬಸವರಾಜ ಜಾಲಗಾರ, ಗಂಗಾಧರ ಗೋಡಿ, ಶಿವನಗೌಡ್ರ ಅಡರಕಟ್ಟಿ, ಪವನ ಬಂಕಾಪೂರ, ಪಕ್ಕೀರೇಶ ಅಣ್ಣಿಗೇರಿ, ಶಿವಾನಂದ ಬನ್ನಿಮಟ್ಟಿ, ಮಹಾಂತೇಶ ಉಮಚಗಿ, ಮಲ್ಲಿಕಾರ್ಜುನ ನೀರಾಲೋಟಿ, ತಹಸೀಲ್ದಾರ ಕಚೇರಿ ಸಿಬ್ಬಂದಿಗಳು ಇದ್ದರು.

# ಆಯವ್ಯಯ ತಯಾರಿಕೆಗೆ ಬೇಡಿಕೆ ಸಲ್ಲಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಹಾತ್ಮ ಗಾಂಧಿ ನರೇಗಾ ಯೋಜನೆಯ 2025-26ನೇ ಸಾಲಿನ ಕಾರ್ಮಿಕ ಆಯವ್ಯಯ ತಯಾರಿಸಲು 'ಉದ್ಯೋಗ ಖಾತರಿ ನಡಿಗೆ ಸಬಲತೆಯಡೆಗೆ' ಅಭಿಯಾನವನ್ನು ಯಶಸ್ವಿಗೊಳಿಸಿ ಗ್ರಾಮ ಸಭೆ ಹಮ್ಮಿಕೊಳ್ಳಲಾಗಿದೆ. ಈ ಗ್ರಾಮಸಭೆಗೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಬೇಡಿಕೆಗಳನ್ನು ಸಲ್ಲಿಸಬೇಕು ಎಂದು ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೊರವನವರ ತಿಳಿಸಿದ್ದಾರೆ.

ಗದಗ ತಾ.ಪಂ ವ್ಯಾಪ್ತಿಯ 27 ಗ್ರಾ.ಪಂ.ಗಳ ರೈತರು ಹಾಗೂ ಕೂಲಿಕಾರರು ಗ್ರಾ.ಪಂ ಹಾಗೂ ಕೃಷಿ, ತೋಟಗಾರಿಕೆ, ರೇಷ್ಮೆ, ಅರಣ್ಯ ಇಲಾಖೆಗಳಲ್ಲಿ ಕಾಮಗಾರಿಗಳ ಅರ್ಜಿ ಸಲ್ಲಿಸಲು ನವೆಂಬರ್ 5 ಕೊನೆಯ ದಿನವಾಗಿದೆ.

ಸೆಪ್ಟಂಬರ್ ತಿಂಗಳ ವೈಯಕ್ತಿಕ ಕಾಮಗಾರಿಗಳ ವಿತರಾಣಾ ಅಭಿಯಾನದ ಜೊತೆಗೆ ಅನುಷ್ಠಾನ ಇಲಾಖೆಗಳಿಂದ ರೈತರಿಂದ ಬೇಡಿಕೆಗಳನ್ನು ಸಂಗ್ರಹಿಸಲಾಗುತ್ತಿದ್ದು, ಅಕ್ಟೋಬರ್ 2ರಿಂದ ನವೆಂಬರ್ 10ರವರೆಗೆ ವಿಶೇಷ ಗ್ರಾಮ ಸಭೆ ನಡೆಸಿ ಪ್ರತಿ ಗ್ರಾ.ಪಂ.ನಲ್ಲಿ ಬೇಡಿಕೆ ಪೆಟ್ಟಿಗೆ, ಮನೆ ಮನೆ ಭೇಟಿ, ವೈಯಕ್ತಿಕ ಕಾಮಗಾರಿಗಳ ಮಾಹಿತಿಯುಳ್ಳ ಕರಪತ್ರ ಹಂಚಿಕೆ ಮಾಡಿ ಬೇಡಿಕೆ ಸಂಗ್ರಹಿಸಲಾಗುತ್ತಿದೆ ಎಂದರು.

ನರೇಗಾ ಯೋಜನೆಯ 2025-26ನೇ ಸಾಲಿನ ಕಾರ್ಮಿಕ ಆಯವ್ಯಯ ತಯಾರಿಸಲು ತಾಲೂಕಿನ 27 ಗ್ರಾಮ ಪಂಚಾಯತಿಗಳಲ್ಲಿ ವಾರ್ಡ್ ಸಭೆ, ಗ್ರಾಮ ಸಭೆ ನಡೆಸಲು ದಿನಾಂಕ ಮತ್ತು ನೋಡಲ್ ಅಧಿಕಾರಿಗಳ ನೇಮಕ ಮಾಡಲಾಗಿದೆ. ಈ ಗ್ರಾಮ ಸಭೆಗೆ ರೈತರು, ಎನ್.ಆರ್.ಎಲ್.ಎಂ ಸಂಜೀವಿನಿ ಒಕ್ಕೂಟದ ಮಹಿಳಾ ಸದಸ್ಯರು, ಕೂಲಿಕಾರರು, ಸಾರ್ವಜನಿಕರು ಭಾಗವಹಿಸಿ ಬೇಡಿಕೆಗಳನ್ನು ಸಲ್ಲಿಸಬಹುದಾಗಿದೆ.

ರೈತರು ಗ್ರಾ.ಪಂಗೆ ಭೇಟಿ ನೀಡಿ ಅರ್ಜಿ ಸಲ್ಲಿಸುವ ಬದಲು ತಮ್ಮ ಬಳಿ ಇರುವ ಸ್ಮಾರ್ಟ್‌ಫೋನ್ ಮೂಲಕ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ ತಮಗೆ ಬೇಕಿರುವ ಕಾಮಗಾರಿಗೆ ಆನ್ಲೈನ್‌ನಲ್ಲೇ ಅರ್ಜಿ ಸಲ್ಲಿಸಬಹುದು ಎಂದು ಮಲ್ಲಯ್ಯ ಕೊರವನವರ ತಿಳಿಸಿದ್ದಾರೆ.

# ಕಿತ್ತೂರು ಚನ್ನಮ್ಮನ ಆದರ್ಶ ಪಾಲಿಸಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕಿತ್ತೂರು ಚನ್ನಮ್ಮನ ಹೆಸರು ಕೇಳಿದರೆ ಮೈಯಲ್ಲಿ ರೋಮಾಂಚನವಾಗುತ್ತದೆ. ಅವಳ ಧೈರ್ಯ, ಸ್ಥೈರ್ಯಗಳು ನಿಮಗೆ ಆದರ್ಶವಾಗುತ್ತವೆ. ನೀವೆಲ್ಲರೂ ಕಿತ್ತೂರು ಚನ್ನಮ್ಮಳ ಆದರ್ಶಗಳನ್ನು ಪಾಲಿಸುವತ್ತ ಗಮನ ಹರಿಸಬೇಕೆಂದು ಉಪನ್ಯಾಸಕ ಎಫ್.ಎನ್. ಹುಡೇದ ಹೇಳಿದರು.

ಪಟ್ಟಣದ ಎಸ್.ಎ. ಪಿಯು ಕಾಲೇಜಿನಲ್ಲಿ ಆಚರಿಸಲಾದ ವೀರ ರಾಣಿ ಕಿತ್ತೂರು ಚನಮ್ಮ ಜಯಂತ್ಯುತ್ಸವದಲ್ಲಿ ಅವರು ಮಾತನಾಡಿದರು.

ಒಬ್ಬ ಮಹಿಳೆ ಹೇಗೆ ವೀರ ಮಾತೆ ಆಗಬಲ್ಲಳು ಎಂಬುದನ್ನು ಚನ್ನವ್ಮಾಜಿಯ ಜೀವನ ಚರಿತೆಯನ್ನು ಓದಿ ತಿಳಿದುಕೊಳ್ಳಬೇಕು. ಸ್ವಾಭಿಮಾನದ ಬದುಕನ್ನು ಹೇಗೆ ಬದುಕಬೇಕು ಎಂಬುದಕ್ಕೂ ಚನ್ನವ್ಮಾಜಿ ನಮಗೆ ಮಾದರಿಯಾಗಿದ್ದಾಳೆ. ತನ್ನ ಪ್ರಜೆಗಳನ್ನು, ತನ್ನ ಬಂಟರನ್ನು ಆಕೆ ಹೇಗೆ ನೋಡಿಕೊಳ್ಳುತ್ತಿದ್ದಳು ಎಂಬುದನ್ನು ತಿಳಿಯುವದರ ಜೊತೆಗೆ ಆಕೆ ಹೇಗೆ ಸಾಹಸ ಪ್ರಿಯಳಾಗಿದ್ದಳು ಎಂಬುದನ್ನೂ ಸಹ ತಿಳಿದುಕೊಳ್ಳಬೇಕೆಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಉಪನ್ಯಾಸಕ ವಿದ್ಯಾಸಾಗರ, ಹಿರೇಮಠ, ಕಾಲೇಜಿನ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಒಳಮೀಸಲಾತಿ ವರ್ಗೀಕರಣವನ್ನು ಸಚಿವ ಸಂಪುಟ ಸಭೆಯಲ್ಲಿ ತಿರಸ್ಕರಿಸುವಂತೆ ಆಗ್ರಹ

# ಕಾನೂನು ಹೋರಾಟಕ್ಕೂ ಸಿದ್ಧ

■ವಿಜಯಸಾಕ್ಷಿ ಸುದ್ದಿ, ಗದಗ

ಪರಿಶಿಷ್ಟ ಜಾತಿ ಒಳಮೀಸಲಾತಿಯ ವರ್ಗೀಕರಣಕ್ಕೆ ಸಂಬಂಧಿಸಿದಂತೆ ಇತ್ತೀಚೆಗೆ ಸರ್ವೋಚ್ಚ ನ್ಯಾಯಾಲಯದ ಸಪ್ತಪೀಠವು ತೀರ್ಪು ನೀಡಿದ್ದು, ಈ ಬಗ್ಗೆ ರಾಜ್ಯ ಸರ್ಕಾರ ಪರಿಶಿಷ್ಟ ಜಾತಿಯ ಒಳಮೀಸಲಾತಿ ಕುರಿತಾಗಿ ಅವೈಜ್ಞಾನಿಕ, ಅತಾರ್ಕಿಕ ಹಾಗೂ ಅಸಮರ್ಥನೀಯ ದತ್ತಾಂಶಗಳನ್ನು ಆಧರಿಸಿ ಒಳಮೀಸಲಾತಿ ವರ್ಗೀಕರಣಕ್ಕೆ ಮುಂದಾಗಿರುವುದು ಸಾಮಾಜಿಕ ನ್ಯಾಯದ ಕಗ್ಗೊಲೆಯಾಗಿದೆ. ಈ ಬಗ್ಗೆ ಏಕಪಕ್ಷೀಯ ನಿರ್ಧಾರಗಳನ್ನು ಕೈಗೊಳ್ಳಲು ಹೊರಟಿರುವ ರಾಜ್ಯ ಸರ್ಕಾರದ ನಡೆಯನ್ನು ಖಂಡಿಸಿ, ರಾಜ್ಯದ ದಮನಿತ ಹಾಗೂ ಅವಕಾಶ ವಂಚಿತ ಅಲೆಮಾರಿ, ಬಂಜಾರ ಭೋವಿ ಕೊರಮ-ಕೊರಚ-ಕೊರವ ಸಮುದಾಯಗಳ ಪರವಾಗಿ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯ ಸರ್ಕಾರವನ್ನು ಒತ್ತಾಯಿಸಿದರು.

2011ರ ಜನಗಣತಿಯ ಅಂಕಿಅಂಶಗಳನ್ನು ಪರಿಗಣಿಸದೇ, 2024ರ ರಾಜ್ಯದಲ್ಲಿ 101 ಪರಿಶಿಷ್ಟ ಜಾತಿಗಳ ಸಾಮಾಜಿಕ ಹಿಂದುಳಿದಿರುವಿಕೆ, ನಡುವಿನ ಮೀಸಲಾತಿ ಹಂಚಿಕೆಯ ಕುರಿತಾದ, ಹಾಗೂ ಪರಿಶಿಷ್ಟ ಜಾತಿಯ, ಶೈಕ್ಷಣಿಕ, ಔದ್ಯೋಗಿಕ ರಾಜಕೀಯ ಮೀಸಲಾತಿ ಪ್ರಾತಿನಿಧ್ಯವನ್ನು ಕುರಿತಾದ ಸಮರ್ಥನೀಯ ವೈಜ್ಞಾನಿಕ ದತ್ತಾಂಶಗಳನ್ನು (ಎಂಪೆರಿಕಲ್ ಡೇಟಾ) ಕ್ರೋಢೀಕರಿಸಿ, ವೈಜ್ಞಾನಿಕವಾಗಿ ವಿಶ್ಲೇಷಿಸಲು ಸಾಮಾಜಿಕ, ಶೈಕ್ಷಣಿಕ ಮತ್ತು ಕಾನೂನು ಪರಿಣಿತಿಯುಳ್ಳ ತಜ್ಞರ ಸಮಿತಿಯನ್ನು ಕೂಡಲೇ ರಚಿಸಬೇಕು. ಸರ್ವೋಚ್ಚ ನ್ಯಾಯಾಲಯವು ಒಳಮೀಸಲಾತಿ ಕುರಿತು ತೀರ್ಪು ನೀಡಿರುವುದನ್ನು ಪ್ರಶ್ನಿಸಿ 9ನೇ ಪೀಠಕ್ಕೆ ಮನವಿ ಮಾಡಿಕೊಳ್ಳಲು ಈ ವಂಚಿತ ಸಮುದಾಯಗಳು ಮತ್ತು ಸದರಿ ಸಂಘವು ಕಾನೂನು ಹೋರಾಟಕ್ಕೂ ಸಿದ್ಧವಾಗಿದೆ ಎಂದು ತಿಳಿಸಿದರು.



ಈ ಸಂದರ್ಭದಲ್ಲಿ ಚಂದ್ರಕಾಂತ ಚವ್ಹಾಣ, ಕೆ.ಸಿ. ನಭಾಪೂರ, ಕುಬೇರಪ್ಪ ರಾಠೋಡ, ಶಿವಪ್ಪ ನಾಯ್ಕ, ಟಿ.ಡಿ. ಪೂಜಾರ, ಎನ್.ವ್ಹಿ. ರಾಠೋಡ, ಕುಬೇರಪ್ಪ ಪವಾರ, ಠಾಕೂರ ಜಾಧವ, ಗೋಪಾಲ ಪೂಜಾರ, ರಾಮಪ್ಪ ಗುರಪ್ಪ ನಾಯ್ಕ, ಧನುರಾಮ ತಂಬೂರಿ, ಅನಿಲ ಕಾರಭಾರಿ, ವಿಠ್ಠಲ ತೋಟದ, ಧನಸಿಂಗ ನಾಯ್ಕ, ರಾಮಪ್ಪ ಚವ್ಹಾಣ, ಗೋವಿಂದ ಢೋಣಿ, ಬಸವರಾಜ ಭಜಂತ್ರಿ, ರಾಘವೇಂದ್ರ ಶಾಂತಗಿರಿ, ವಿಜಯ ಪೂಜಾರ, ಸುರೇಶ ಕಟ್ಟಿಮನಿ, ಲೋಕೇಶ ಕಟ್ಟಿಮನಿ ಹಾಗೂ ಅವಕಾಶ ವಂಚಿತ ಅಲೆಮಾರಿ, ಬಂಜಾರ ಭೋವಿ ಕೊರಮ- ಕೊರಚ-ಕೊರವ ಸಮುದಾಯಗಳ ಮುಖಂಡರು, ಯುವಕರು ಉಪಸ್ಥಿತರಿದ್ದರು.

ಈ ಬಗ್ಗೆ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ, ನಮ್ಮ ಒಳಮೀಸಲಾತಿ ವಿರೋಧಿ ಸಮಿತಿಯ ಹಕ್ಕೊತ್ತಾಯಗಳಾದ ಪರಿಶಿಷ್ಟ ಜಾತಿಯ 101 ಸಮುದಾಯಗಳ ಸಾಮಾಜಿಕ, ಶೈಕ್ಷಣಿಕ ಹಾಗೂ ರಾಜಕೀಯ ಪ್ರಾತಿನಿಧ್ಯ ಕುರಿತಾದ ಸಮಗ್ರ, ವಸ್ತುನಿಷ್ಟ ಅಂಕಿ-ಅಂಶಗಳ ಕೊರತೆ ಇರುವ, ಅಮಸಮರ್ಥನೀಯ ಹಾಗೂ ಅತಾರ್ಕಿಕ ದತ್ತಾಂಶಗಳ ನ್ಯಾಯಮೂರ್ತಿ ಸದಾಶಿವ ಆಯೋಗ ವರದಿ ಆಧರಿಸಿದ ಪರಿಶಿಷ್ಟ ಜಾತಿಯ ಒಳಮೀಸಲಾತಿ ವರ್ಗೀಕರಣವನ್ನು ತಿರಸ್ಕರಿಸಬೇಕು ಎಂದು ಒತ್ತಾಯಿಸಿದರು.

## ಮೃತನ ಕುಟುಂಬಕ್ಕೆ ನ್ಯಾಯ ದೊರಕಿಸಲು ಆಗ್ರಹ

■ವಿಜಯಸಾಕ್ಷಿ ಸುದ್ದಿ, ಗದಗ



ನಗರದ ಟಿಪ್ಪು ಸುಲ್ತಾನ ಸರ್ಕಲ್‌ನಿಂದ ಮುಳಗುಂದ ನಾಕಾ ಮುಖ್ಯ ರಸ್ತೆ, ಉಡುಪಿ ಹೋಟೆಲ್ ಪಕ್ಕದಲ್ಲಿ ನಡೆಯುತ್ತಿದ್ದ ಪೈಪ್ ದುರಸ್ತಿ ಕಾರ್ಯದ ಸಮಯದಲ್ಲಿ ಮಣ್ಣು ಕುಸಿದು ಪ್ರಾಣ ಕಳೆದುಕೊಂಡ ನಜೀರಸಾಬ ಬೈಲಹುಲಿ ಇವರ ಕುಟುಂಬ ಬೀದಿಗೆ ಬಿದ್ದಂತಾಗಿದೆ. ಇಂತಹ ಘಟನೆ ನಡೆದು ಸುಮಾರು 10 ದಿನಗಳು ಕಳೆದರೂ ಸಂಬಂಧಿಸಿದ ಶುಭಂ ಏಜೆನ್ಸಿ ಆಗಲಿ, ನೀರಿನ ಪೈಪ್‌ಲೈನ್ ದುರಸ್ತಿ ಕಾರ್ಯ ಕೈಗೊಂಡ ನಗರಸಭೆ ಅಧಿಕಾರಿಗಳಾಗಲಿ, ಗದಗ ಜಿಲ್ಲಾಧಿಕಾರಿಗಳಾಗಲಿ ಈವರೆಗೂ ಆ ಕುಟುಂಬಕ್ಕೆ ನ್ಯಾಯ ಒದಗಿಸಿಕೊಡದೆ ಇರುವುದು ವಿಷಾದನೀಯ ಸಂಗತಿ ಎಂದು ಗದಗ ಜಿಲ್ಲಾ ಜೆಡಿಎಸ್ ಪ್ರಧಾನ ಕಾರ್ಯದರ್ಶಿ ಹಾಜಿಅಲಿ ಎಚ್.ಕೊಪ್ಪಳ ಹೇಳಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಒಬ್ಬ ಕೂಲಿ ಕಾರ್ಮಿಕನ ಪ್ರಾಣಕ್ಕೆ ಯಾವುದೇ ರೀತಿಯ ಬೆಲೆ ಇಲ್ಲ ಎಂಬಂತೆ ವರ್ತಿಸುತ್ತಿರುವ ಅಧಿಕಾರಿಗಳಾಗಲಿ ಅಥವಾ ದೂರು ದಾಖಲಾಗಿ ಹತ್ತು ದಿನಗಳಾದರೂ ಈವರೆಗೆ ಆರೋಪಿಗಳನ್ನು ಬಂಧಿಸದೆ ಇರುವ ಪೊಲೀಸ್ ಇಲಾಖೆಯ ಕಾರ್ಯದ ಮೇಲೆಯೂ ಸಂಶಯ ವ್ಯಕ್ತವಾಗುತ್ತದೆ.

ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜಿಲ್ಲಾಧಿಕಾರಿಗಳು ಮಧ್ಯಸ್ಥಿಕೆ ವಹಿಸಿ ಈ ಕುಟುಂಬಕ್ಕೆ ಹೆಚ್ಚಿನ ಪರಿಹಾರವನ್ನು ಕೊಡಿಸಬೇಕೆಂದು ಹಾಜಿಅಲಿ ಎಚ್.ಕೊಪ್ಪಳ ಆಗ್ರಹಿಸಿದ್ದಾರೆ.

ಜಿಲ್ಲಾ ವಾಲ್ಮೀಕಿ ನಾಯಕ ಸೇವಾ ಸಂಘದಿಂದ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ

# ವಾಲ್ಮೀಕಿ ಸರ್ಕಲ್ ನಿರ್ಮಾಣವಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ಬಹುತೇಕ ವಾಲ್ಮೀಕಿ ಸಮುದಾಯದ ಜನರು ಸಾಕಷ್ಟು ಪ್ರಮಾಣದಲ್ಲಿದ್ದಾರೆ. ನಗರದಾದ್ಯಂತ ಹಲವು ಮಹನೀಯರ ವೃತ್ತಗಳನ್ನು ನಿರ್ಮಿಸಲಾಗಿದೆ. ಆದರೆ, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವೃತ್ತ ನಿರ್ಮಾಣ ಆಗದಿರುವುದು ಬೇಸರದ ಸಂಗತಿಯಾಗಿದೆ. 2025ರ ವಾಲ್ಮೀಕಿ ಜಯಂತಿಯ ಒಳಗಾಗಿ ವಾಲ್ಮೀಕಿ ಸರ್ಕಲ್ ನಿರ್ಮಾಣವಾಗದಿದ್ದರೆ ಉಗ್ರ ಹೋರಾಟ ಅನಿವಾರ್ಯ ಎಂದು ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾ ಸಭಾ ಯುವ ಘಟಕದ ರಾಜ್ಯಾಧ್ಯಕ್ಷ ಡಾ. ತುಳಸಿರಾಮ ಎಚ್ಚರಿಕೆ ನೀಡಿದರು.

ಅವರು ಭಾನುವಾರ ಗದಗ ಜಿಲ್ಲಾ ವಾಲ್ಮೀಕಿ ನಾಯಕ ಸೇವಾ ಸಂಘದ ವತಿಯಿಂದ ಹಮ್ಮಿಕೊಂಡಿದ್ದ ಆದಿಕವಿ ಶ್ರೀ ಮಹರ್ಷಿ ಮಹರ್ಷಿ ವಾಲ್ಮೀಕಿ ಜಯಂತಿ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ಯುವ ಘಟಕದ ಗದಗ ಜಿಲ್ಲಾಧ್ಯಕ್ಷ ಅನಿಲಕುಮಾರ ಸಿದ್ದಮ್ಮನಹಳ್ಳಿ ಮಾತನಾಡಿದರು. ರಾಜೇಶ್ವರಿ ಕಲಾ ಕುಟೀರ ತಂಡದ ಮೇಘನಾ ವಾಲ್ಮೀಕಿ ಅವರಿಂದ ಭರತನಾಟ್ಯ ಪ್ರದರ್ಶನದ ಮೂಲಕ ಸರ್ವರನ್ನು ಸ್ವಾಗತಿಸಲಾಯಿತು. ವಾಲ್ಮೀಕಿ ಸರ್ಕಲ್‌ನಿಂದ ಬನ್ನಿಕಟ್ಟ ಪಂಚರಹೊಂಡ, ಬಸವೇಶ್ವರ ಸರ್ಕಲ್, ಟಾಂಗಾಕೂಟ ಮಹೇಂದ್ರಕರ್ ಸರ್ಕಲ್ ಹಾಗೂ ಡಿಸಿ ಮಿಲ್ ಮಾರ್ಗವಾಗಿ ಗಂಗಾಪುರ ಪೇಟೆಯಲ್ಲಿರುವ ಶ್ರೀ ದುರ್ಗಾದೇವಿ ದೇವಸ್ಥಾನ ಆವರಣದವರೆಗೆ ಭಾವಚಿತ್ರ ಮೆರವಣಿಗೆ ನಡೆಯಿತು.



ಶಿಕ್ಷಕ ಬಾಹುಬಲಿ ಜೈನರ್ ಕಾರ್ಯಕ್ರಮವು ನಿರುಪಿಸಿದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಸಮಾಜ ಕಲ್ಯಾಣ ಇಲಾಖೆಯ ಮಹೇಶ ಪೋತದಾರ, ಪರಿಶಿಷ್ಠ ಪಂಗಡ ನೌಕರ ಸಂಘದ ದೇವೇಂದ್ರಪ್ಪ ತಳವಾರ, ಪಿ.ಎಸ್.ಐ. ಶಕುಂತಲಾ ನಾಯಕ, ಪರಿಶಿಷ್ಟ ಪಂಗಡ ನೌಕರ ಸಂಘದ ಪ್ರಧಾನ ಕಾರ್ಯದರ್ಶಿ ವೀರೇಶ ವಾಲ್ಮೀಕಿ, ನಗರ ಸಭಾ ಸದಸ್ಯರಾದ ನಾಗರಾಜ ತಳವಾರ, ನಗರಸಭಾ ಸದಸ್ಯೆ ಲಕ್ಷ್ಮೀ ಅನಿಲಕುಮಾರ ಸಿದ್ದಮ್ಮನಹಳ್ಳಿ, ಕೆ.ಡಿ.ಪಿ. ಸದಸ್ಯರಾದ ಎಸ್. ಎನ್. ಬಳ್ಳಾರಿ, ವಸಂತಕುಮಾರ ಸಿದ್ದಮ್ಮನಹಳ್ಳಿ, ಗೋವಿಂದರಾಜ ಪನ್ನೂರ, ಅರುಣ ಬೆಳಧಡಿ, ಶಿವಾನಂದ ತಳವಾರ, ವಸಂತ ವಾಲ್ಮೀಕಿ, ಅನಿಲ ಪೂಜಾರ, ಶ್ರೀಕಾಂತ ಪೂಜಾರ, ವಿಜಯ ಕುರಗೋಡ, ದತ್ತು ಬೆಳಧಡಿ, ಕಿರಣ ನಾಯ್ಕರ, ಮಾರುತಿ ಕಾತರಕಿ, ಈಶ್ವರ ರೌಡೂರು, ರಮೇಶ ಹೊಟ್ಟಿ ಮುಂತಾದವರಿದ್ದರು.

ವಸತಿ ಯೋಜನೆಯಲ್ಲಿ ಭ್ರಷ್ಟಾಚಾರ ನಡೆಸುತ್ತಿರುವವರ ಮೇಲೆ ಕ್ರಮಕ್ಕೆ ಆಗ್ರಹಿಸಿ ಮನವಿ

# ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದ ಸ್ಲಂ ಪ್ರದೇಶದ ಜನರಿಗೆ ಪುನರ್ವಸತಿ ಕಲ್ಪಿಸುವ ಉದ್ದೇಶದಿಂದ ನಗರದ ವಿವಿಧ ಸ್ಲಂ ಪ್ರದೇಶದಲ್ಲಿ ಪ್ರಧಾನ ಮಂತ್ರಿ ಆವಾಸ್ ಯೋಜನೆಡಿಯಲ್ಲಿ 863 ಮನೆಗಳನ್ನು ಮಂಜೂರು ಮಾಡಲಾಗಿದ್ದು, ಮನೆಗಳನ್ನು ನಿರ್ಮಿಸುವಲ್ಲಿ ಅಧಿಕಾರಿಗಳು ಹಾಗೂ ಗುತ್ತಿಗೆದಾರರು ಸರ್ಕಾರದ ವಸತಿ ಅನುದಾನದ ಜೊತೆಗೆ ಸ್ಲಂ ಜನರಿಂದ ವಂತಿಕೆ ಹಣವನ್ನು ಪಡೆದುಕೊಂಡು ಮನೆಗಳನ್ನು ಸರಿಯಾಗಿ ನಿರ್ಮಿಸದೇ ಗುತ್ತಿದಾರರು ಮತ್ತು ಅಧಿಕಾರಿಗಳು ಜನರಿಗೆ ಮೋಸ ಮಾಡುತ್ತಿದ್ದಾರೆ ಎಂದು ಆರೋಪಿಸಿ ಗದಗ ಜಿಲ್ಲಾ ಸ್ಲಂ ಸಮಿತಿಯ ನೇತೃತ್ವದಲ್ಲಿ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಪ್ರಸಾದ ಅಬ್ಬಯ್ಯ ಅವರಿಗೆ ಮನವಿ ನೀಡಿ ಆಗ್ರಹಿಸಿದರು.



ಈ ಸಂದರ್ಭದಲ್ಲಿ ಗದಗ ಜಿಲ್ಲಾ ಸ್ಲಂ ಸಮಿತಿ ಆದ್ಯಕ್ಷ ಇಮ್ತಿಯಾಜ ಆರ್. ಮಾನ್ವಿ ಮಾತನಾಡಿ, ಪ್ರಧಾನ ಮಂತ್ರಿ ಆವಾಸ್ ಯೋಜನೆಯಲ್ಲಿ ನಗರದ ಅನೇಕ ಸ್ಲಂ ಪ್ರದೇಶಗಳಲ್ಲಿ ಪ್ರಾರಂಭಿಸಲಾಗಿರುವ ಮನೆಗಳ ನಿರ್ಮಾಣ ಕಾಮಗಾರಿಯು ಕಳಪೆ ಗುಣಮಟ್ಟದಿಂದ ಕೂಡಿದೆ. ಅಧಿಕಾರಿಗಳ ದುರಾಡಳಿತ ಮತ್ತು ಗುತ್ತಿಗೆದಾರನ ಮೇಲೆ ಕ್ರಮಕ್ಕೆ ಆಗ್ರಹಿಸಿ ಕಳೆದ 3 ವರ್ಷಗಳಿಂದ ನಿರಂತರ ಹೋರಾಟ ಮಾಡುತ್ತಿದ್ದೇವೆ. ಸ್ಲಂ ಜನರ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಿ ಗುತ್ತಿಗೆದಾರ ಮತ್ತು ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಸ್ಲಂ ಸಮಿತಿ ಪ್ರಧಾನ ಕಾರ್ಯದರ್ಶಿ ಅಶೋಕ ಕುಸಬಿ, ಮುಖಂಡರಾದ ಇಬ್ರಾಹಿಂ ಮುಲ್ಲಾ, ಮೆಹರುನಿಸಾ ಡಂಬಳ, ಮೈಮುನ ಬೈರಕದಾರ, ಮೌಲಾಸಾಬ ಗಚ್ಚಿ, ಬಾಷಾಸಾಬ ಡಂಬಳ, ದುರ್ಗಪ್ಪ ಮಣ್ಣವಡ್ಡರ, ಪ್ರೇಮಾ ಮಣವಡ್ಡರ, ಸುಶೀಲಮ್ಮ ಗೊಂದಾರ, ಮೆಹಬೂಬಸಾಬ ಬಳ್ಳಾರಿ, ಸಾಕ್ರುಬಾಯಿ ಗೋಸಾವಿ, ಖಾಜೇಸಾಬ ಇಸ್ಮಾಯಿಲನವರ, ಮಕ್ತುಮಸಾಬ ಮುಲ್ಲಾನವರ, ಈರಮ್ಮ ಬೇವಿನಮರದ, ನಾಗರಾಜ ಮಣವಡ್ಡರ, ದಾದು ಗೋಸಾವಿ, ಖಾಜೇಸಾಬ ಬಳ್ಳಾರಿ, ಮಲೇಶಪ್ಪ ಕಲಾಲ, ಚಂದ್ರಪ್ಪ ಲಕ್ಕುಂಡಿ, ಶರಣಪ್ಪ ಬಿಂಕದಕಟ್ಟಿ ಮುಂತಾದವರಿದ್ದರು.

ಪ್ರಸಾದ ಅಬ್ಬಯ್ಯ ಮನವಿ ಸ್ವಿಕರಿಸಿ ಮಾತನಾಡಿ, ಸ್ಲಂ ಘೋಷಣೆ ಪ್ರಕ್ರಿಯೆ ಕುರಿತು ಆಯುಕ್ತರ ಜೊತೆಗೆ ಚರ್ಚಿಸಿ ಸರಿಪಡಿಸಲಾಗುವುದು, ವಸತಿ ಯೋಜನೆಯಲ್ಲಿ ಅಧಿಕಾರಿಗಳ ಮತ್ತು ಗುತ್ತಿಗೆದಾರರಿಂದ ನಡೆಸಲಾಗಿರುವ ಕಳಪೆ ಕಾಮಗಾರಿ ಮತ್ತು ಹಣದ ದುರ್ಬಳಕ್ಕೆ ಕುರಿತು ತನಿಖೆ ನಡೆಸಲಾಗುವುದು ಎಂದು ಭರವಸೆ ನೀಡಿದರು.


ಸರ್ವರ್ ಸಮಸ್ಯೆಗೆ ಸುಸ್ತಾದ ಪಡಿತರ ಚೀಟಿದಾರರು, ನ್ಯಾಯಬೆಲೆ ಅಂಗಡಿ ಮಾಲೀಕರು

# ಹಬ್ಬಕ್ಕೂ ಸಿಗದ ಪಡಿತರ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಸರಕಾರ ಪಡಿತರ ವ್ಯವಸ್ಥೆಯಡಿ ಜಾರಿಗೊಳಿಸಿರುವ ನೂತನ ತಂತ್ರಾಂಶದಲ್ಲಿಯೂ ಕೆಲವು ತಾಂತ್ರಿಕ ಸಮಸ್ಯೆಗಳು ಬಗೆಹರಿಯದೇ ಹೊಸ ಸಮಸ್ಯೆಗಳು ಉದ್ಭವವಾಗುತ್ತಿರುವದರಿಂದ ಶಿರಹಟ್ಟಿಯ ಪಡಿತರ ವಿತರಣೆ ಕೇಂದ್ರದಲ್ಲಿ ಸರ್ವರ್ ಸಮಸ್ಯೆಗೆ ಪಡಿತರ ಚೀಟಿದಾರರು ಸುಸ್ತಾಗುತ್ತಿದ್ದು, ನ್ಯಾಯಬೆಲೆ ಅಂಗಡಿ ಮಾಲೀಕರು ಹಾಗೂ ಸಿಬ್ಬಂದಿಗಳು ಸಹ ವಿತರಣೆ ಮಾಡುವುದಕ್ಕೆ ತೊಂದರೆಯನ್ನು ಅನುಭವಿಸುತ್ತಿದ್ದಾರೆ.

ಕಳೆದ 10 ದಿನಗಳಿಂದ ನ್ಯಾಯಬೆಲೆ ಅಂಗಡಿಗಳ ಮುಂದೆ ಜನರು ಸರತಿ ಸಾಲಿನಲ್ಲಿ ನಿಂತು ಕೊನೆಗೆ ಸರ್ವರ್ ಸಮಸ್ಯೆಯಿಂದಾಗಿ ಮನೆಗೆ ಮರಳಿ ಹೋಗುವ ಸ್ಥಿತಿ ನಿರ್ಮಾಣವಾಗಿದೆ.



ಸರ್ವರ್‌ನ್ನು ಹಲವು ಇಲಾಖೆಗಳು ಅವಲಂಬಿಸುತ್ತಿದ್ದು, ಮುಖ್ಯವಾಗಿ ಹೊಸ ಕಾರ್ಡ್ ಹಾಗೂ ತಿದ್ದುಪಡಿಗೂ ಸಮಸ್ಯೆಯಾಗಿದೆ. ತಿಂಗಳು ಮುಗಿಯುತ್ತಾ ಬಂದರೂ ಅನ್ನಭಾಗ್ಯದ ಅಕ್ಕಿಗಾಗಿ ನಿತ್ಯದ ಕೆಲಸ ಕಾರ್ಯಗಳನ್ನು ಬದಿಗಿಟ್ಟು ನ್ಯಾಯಬೆಲೆ ಅಂಗಡಿಗಳ ಮುಂದೆ ಅಲೆದಾಡುವ ಸ್ಥಿತಿ ಎದುರಾಗಿದೆ.

ಕೂಲಿನಾಲಿ ಮಾಡಿ ಜೀವನ ಸಾಗಿಸುವ ಬಡ ಕುಟುಂಬದ ಸಮಸ್ಯೆಗಳಂತೂ ಹೇಳತೀರದಾಗಿದೆ. ಕೂಲಿ ಕಾರ್ಮಿಕರು ದಿನಕ್ಕೆ ರೂ. 250ರಿಂದ ರೂ. 300 ದುಡಿಯುತ್ತಿದ್ದಾರೆ. ಒಂದು ದಿನ ಕೆಲಸಕ್ಕೆ ಹೋಗದಿದ್ದರೆ ಅಂದಿನ ಕೂಲಿ ಹಣ ದೊರೆಯದೇ ಹೊಟ್ಟೆಯ ಮೇಲೆ ತಣ್ಣೀರು ಬಟ್ಟೆ ಹಾಕಿಕೊಳ್ಳಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಹೀಗಾಗಿ ತಮ್ಮ ದೈನದಿಂದಿನ ಕೆಲಸ-ಕಾರ್ಯಗಳನ್ನು ಬದಿಗೊತ್ತಿ ಸರತಿ ಸಾಲಿನಲ್ಲಿ ಪಡಿತರ ಸಾಮಗ್ರಿಗೆ ನಿಂತರೂ ವಸ್ತುಗಳು ಸಿಗುತ್ತಿಲ್ಲ.

ಶಿರಹಟ್ಟಿ ಪಟ್ಟಣದ ಜನತಾ ಬಜಾರ್ ನ್ಯಾಯಬೆಲೆ ಅಂಗಡಿಯಲ್ಲಿಯೇ ಅಂದಾಜು 1670ಕ್ಕೂ ಹೆಚ್ಚು ಪಡಿತರದಾರರು ಇದ್ದು, ಪಂಚಾಯಿತಿ ವ್ಯಾಪ್ತಿಯಲ್ಲಿ 3 ಸಾವಿರಕ್ಕೂ ಹೆಚ್ಚು ಅರ್ಹ ಪಡಿತರದಾರರು ಇದ್ದಾರೆ. ಸಾಲು ಸಾಲು ಹಬ್ಬದ ಇಂತಹ ಸಂದರ್ಭದಲ್ಲಿ ಪಡಿತರ ನೀಡದೇ ಇದ್ದರೆ ಹೇಗೆ ಎಂಬುದು ಸಾರ್ವಜನಿಕರ ಪ್ರಶ್ನೆಯಾಗಿದೆ.

ಸಾರ್ವಜನಿಕರಿಗೆ ನಿಗದಿತ ಪಡಿತರ ವಿತರಣೆ ಮಾಡದೇ ಇದ್ದರೆ ನಮಗೂ ಸಮಸ್ಯೆಯಾಗಲಿದೆ. ಇಂತಹ ಕ್ಲಿಷ್ಟಕರ ಸಮಸ್ಯೆಯನ್ನು ಸರ್ಕಾರ ತಕ್ಷಣ ಬಗೆಹರಿಸಬೇಕು ಎಂಬುದು ನ್ಯಾಯಬೆಲೆ ಅಂಗಡಿ ಸಿಬ್ಬಂದಿಗಳು ಅಭಿಪ್ರಾಯಪಡುತ್ತಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿದ ತಹಸೀಲ್ದಾರ ಅನಿಲ ಬಡಿಗೇರ, ಸರ್ವರ್ ಸಮಸ್ಯೆ ರಾಜ್ಯಮಟ್ಟದಲ್ಲಿಯೇ ಇರುವುದರಿಂದ ಪಡಿತರ ಹಂಚಿಕೆಯಲ್ಲಿ ವಿಳಂಬವಾಗುತ್ತಿದೆ. ಬೆಳಗ್ಗೆ 7 ಗಂಟೆಯಿಂದ ರಾತ್ರಿ 10 ಗಂಟೆವರೆಗೆ ಪಡಿತರ ಹಂಚಿಕೆ ಮಾಡಲು ಮೌಖಿಕವಾಗಿ ನ್ಯಾಯಬೆಲೆ ಅಂಗಡಿಯವರಿಗೆ ತಿಳಿಸಲಾಗಿದೆ. ಸಮಸ್ಯೆ ಸರಿಪಡಿಸುವ ಕುರಿತು ಮೇಲಾಧಿಕಾರಿಗಳ ಗಮನಕ್ಕೆ ತರಲಾಗಿದೆ ಎಂದರು.

## ‘ಜನ ಕಲ್ಯಾಣ ಯಾತ್ರೆ’ ಪ್ರತಿಭಟನೆ




■ವಿಜಯಸಾಕ್ಷಿ ಸುದ್ದಿ, ಗದಗ

ಮುಂಡರಗಿ ತಾಲೂಕಾ ಸಾರ್ವಜನಿಕ ಹೋರಾಟ ವೇದಿಕೆ ಹಾಗೂ ಅದ್ವಿಕ್ ವಿವಿಧೋದ್ದೇಶಗಳ ಅಭಿವೃದ್ಧಿ ಸಂಘ ಮುಂಡರಗಿ ಇವರ ಆಶ್ರಯದಲ್ಲಿ ಗದಗ-ಬೆಟಗೇರಿ ರೈಲ್ವೆ ನಿಲ್ದಾಣದ ಎದುರು ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಜನ ಕಲ್ಯಾಣ ಯಾತ್ರೆಯ ಪ್ರತಿಭಟನೆ ಮಾಡಲಾಯಿತು.

ವೇದಿಕೆಯ ಮುಂಡರಗಿ ತಾಲೂಕಾ ಸಂಚಾಲಕ ಬಸವರಾಜ ಯಲ್ಲಪ್ಪ ನವಲಗುಂದ ಮಾತನಾಡಿ, 2014ರ ರೈಲ್ವೆ ಮುಂಗಡ ಪತ್ರದಲ್ಲಿ ಗದಗ-ಹರಪನಹಳ್ಳಿ ನೂತನ ರೈಲು ಮಾರ್ಗ ಮಂಜೂರಾಗಿದ್ದು, 2015ರಲ್ಲಿ ಹರಪನಹಳ್ಳಿವರೆಗೆ 94 ಕಿ.ಮಿ. ಸಮೀಕ್ಷೆ ಮಾಡಲಾಗಿದೆ. ಈ ಮಾರ್ಗಕ್ಕೆ ರೂ 813.14 ಕೋಟಿ ಅಂದಾಜು ಪತ್ರಿಕೆಯನ್ನು ತಯಾರಿಸಲಾಗಿದೆ ಎಂದು ತಿಳಿಸಿದರು.

ಲಾಭ ನಷ್ಟಗಳ ಲೆಕ್ಕಾಚಾರದಲ್ಲಿ ರೈಲ್ವೆ ಯೋಜನೆಯ ವರದಿಯನ್ನು ಸರ್ಕಾರ ಕಾಯ್ದಿರಿಸಿರುತ್ತದೆ. ಹೀಗಾಗಿ ಗದಗ-ಹರಪನಹಳ್ಳಿ ನೂತನ ರೈಲು ಮಾರ್ಗ ಮಂಜೂರಾತಿ ವಿಳಂಬವಾಗುತ್ತಿದ್ದು, ಎಲ್ಲ ಅಡೆತಡೆಗಳನ್ನು ನಿವಾರಿಸಿ ಸರ್ಕಾರ ತಕ್ಷಣ ನೂತನ ರೈಲು ಮಾರ್ಗಕ್ಕೆ ಮಂಜೂರಾತಿ ನೀಡಬೇಕು ಎಂದು ಒತ್ತಾಯಿಸಿದರು.

ಪಟ್ಟಣಕ್ಕೆ ಕಾನೂನು ಮಹಾವಿದ್ಯಾಲಯ ಹಾಗೂ ಒಂದು ಸರ್ಕಾರಿ ಪ್ರೌಢಶಾಲೆಯನ್ನು ಮಂಜೂರು ಮಾಡಬೇಕು. ರಾಜ್ಯಾದ್ಯಂತ ಸರ್ಕಾರಿ ಪಿಯು ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿರುವವರನ್ನು ಕಾಯಂಗೊಳಿಸಬೇಕು ಹಾಗೂ ಅವರಿಗೆ ಸೇವಾ ಭದ್ರತೆ ಒದಗಿಸಬೇಕು ಎಂದರು.

ಈ ಸಂದರ್ಭದಲ್ಲಿ ಕೆಂಚನಗೌಡ ಗದಗ, ಬಸವರಾಜ ಅಗ್ಗದ, ಯಲ್ಲಪ್ಪ ಹೊಂಬಳಗಟ್ಟಿ, ಆನಂದ ಹೊನ್ನಕೇರಿ, ಅನ್ನಪೂರ್ಣ ಕುಬಸದ, ವಿಜಯಲಕ್ಷ್ಮೀ ಯರಾಸಿ, ವಿಶಾಲ ಕೋನುರಿ, ಲಕ್ಷ್ಮೀಬಾಯಿ ಯರಾಸಿ, ಮೀನಾಕ್ಷಮ್ಮ ಶಿರೂರು, ಹನುಮಪ್ಪ ಶಿರೂರು, ಸುರೇಶ ಶಾಬಾದಿ, ಶಶಿ ಶಾಬಾದಿ, ಲಲಿತಾ ಹೊಸಮನಿ, ಅನ್ನಕ್ಕ ಹಿರೇಗೌಡರ ಮುಂತಾದವರು ಉಪಸ್ಥಿತರಿದ್ದರು.



ಶಿರಹಟ್ಟಿ ತಾಲೂಕಿನ ಅಲಗಿಲವಾಡ ಶಾಲೆಯಲ್ಲಿ ಕಿತ್ತೂರ ರಾಣಿ ಚನ್ನಮ್ಮ ಜಯಂತ್ಯುತ್ಸವ ಕಾರ್ಯಕ್ರಮ ಆಯೋಜಿಸಲಾಗಿತ್ತು. ಮಕ್ಕಳು ರಾಣಿ ಚನ್ನಮ್ಮಳ ವೇಷ-ಭೂಷಣ ಧರಿಸಿ ಸಂಭ್ರಮಪಟ್ಟರು. ಕಾರ್ಯಕ್ರಮದಲ್ಲಿ ಪ್ರಧಾನ ಗುರುಗಳಾದ ಹಾಲೇಶ ಎಸ್.ಜಕ್ಕಲಿ, ಶಿಕ್ಷಕರಾದ ನೇಮೇಶಪ್ಪ ಯರಗುಪ್ಪಿ, ಅಂಗನವಾಡಿ ಗುರುಮಾತೆರಾದ ಮಹಾದೇವಿ ಹಸವಿಮಠ, ಶಾಲಾ ಮಕ್ಕಳು ಗ್ರಾಮದ ಗುರುಹಿರಿಯರು ಪಾಲ್ಗೊಂಡಿದ್ದರು.

# ಜೆಡಿಎಸ್ ಸದಸ್ಯತ್ವ ಅಭಿಯಾನ

■ವಿಜಯಸಾಕ್ಷಿ ಸುದ್ದಿ, ನವಲಗುಂದ

ವಿಧಾನಸಭಾ ಕ್ಷೇತ್ರದಲ್ಲಿ ಜೆಡಿಎಸ್ ಕನಿಷ್ಠ 50 ಸಾವಿರ ಸದಸ್ಯತ್ವ ನೋಂದಾಯಿಸುವ ವಿಶ್ವಾಸ ತಮಗಿದೆ ಎಂದು ಮಾಜಿ ಸಚಿವ ಕೆ.ಎನ್. ಗಡ್ಡಿ ವಿಶ್ವಾಸ ವ್ಯಕ್ತಪಡಿಸಿದರು.

ಪಕ್ಷದ ಜಿಲ್ಲಾ ಅಧ್ಯಕ್ಷ ಬಿ.ಬಿ. ಗಂಗಾಧರಮಠ ಹಾಗೂ ಇತರ ಪದಾಧಿಕಾರಿಗಳೊಂದಿಗೆ ನವಲಗುಂದದಲ್ಲಿ ಸದಸ್ಯತ್ವ ಅಭಿಯಾನಕ್ಕೆ ಚಾಲನೆ ನೀಡಿದ ಅವರು ಕ್ಷೇತ್ರದಲ್ಲಿ ಪಕ್ಷವನ್ನು ಸದೃಢವಾಗಿ ಕಟ್ಟಿ ಬೆಳೆಸಲು ತಾವೆಲ್ಲ ಪಣತೊಟ್ಟಿರೋದಾಗಿ ಹೇಳಿದರು.



ಸಾಲಮನ್ನಾ ಸೇರಿದಂತೆ ಅನೇಕ ಜನಪರ ಯೋಜನೆಗಳ ಮೂಲಕ ರೈತರ ಹಿತ ಕಾಪಾಡಿದ್ದು ಎಚ್.ಡಿ. ಕುಮಾರಸ್ವಾಮಿಯವರು. ಆದರೆ ಅವರ ಉಪಕಾರವನ್ನು ತಾವು ತೀರಿಸಲಿಲ್ಲ ಎನ್ನುವ ನೋವು ರೈತರಲ್ಲಿದೆ. ಹೀಗಾಗಿ ಜೆಡಿಎಸ್ ಸದಸ್ಯತ್ವ ಹೊಂದಲು ಕ್ಷೇತ್ರದ ತುಂಬೆಲ್ಲ ಜನರು ಉತ್ಸಾಹ ತೋರುತ್ತಿದ್ದಾರೆ ಎಂದರು.

ಪಕ್ಷದ ಜಿಲ್ಲಾ ಅಧ್ಯಕ್ಷ ಬಿ.ಬಿ. ಗಂಗಾಧರಮಠ ಮಾತನಾಡಿ, ನವಲಗುಂದ ವಿಧಾನಸಭಾ ಕ್ಷೇತ್ರದಲ್ಲಿ ಈಗಲೂ ಜನರಲ್ಲಿ ಜೆಡಿಎಸ್ ಪಕ್ಷದ ಮನಸ್ಥಿತಿ ಇದೆ ಎಂದರು. ಪಕ್ಷದ ಮುಖಂಡರಾದ ಪ್ರಕಾಶ ಅಂಗಡಿ, ಜಿ.ಎನ್. ತೋಟದ, ಎಂ.ಎಸ್. ಪಾಟೀಲ, ಶ್ರೀಶೈಲ ಮೂಲಿಮನಿ, ಡಿ.ಎಂ. ಶಲವಡಿ, ವೀರೇಶ ಶಾನುಭೋಗರ, ಮೈಲಾರಪ್ಪ ವೈದ್ಯ, ನಾಗಪ್ಪ ಬಂಡಿವಾಡ, ಈಶ್ವರಯ್ಯ ಹಿರೇಮಠ, ರಾಚಯ್ಯ ಚಿಕ್ಕಮಠ, ಗಂಗಾಧರ ಪತ್ತಾರ, ಮಂಜಪ್ಪ ಆಡಕಾವು, ಈರಪ್ಪ ಬಡಿಗೇರ, ಜಿ.ಟಿ. ಅಕ್ಕಿ, ಶಿವಪ್ಪ ಗುಜ್ಜಳ, ಮಲ್ಲಪ್ಪ ಮಡಿವಾಳರ ಮತ್ತಿತರರು ಹಾಜರಿದ್ದರು.

# ಪ್ರೊ. ಸಿ.ಎನ್.ಆರ್ ಅವರಿಗೆ ನಾಗಾರ್ಜುನ ಪ್ರಶಸ್ತಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೇಶದ ಪ್ರತಿಷ್ಠಿತ ಭಾರತರತ್ನ ಪ್ರಶಸ್ತಿ ಸೇರಿದಂತೆ ಸಾವಿರಾರು ಪ್ರಶಸ್ತಿಗಳಿಗೆ ಭಾಜನರಾಗಿರುವ ಭಾರತರತ್ನ ಪ್ರೊ. ಸಿ.ಎನ್.ಆರ್. ರಾವ್ ಅವರಿಗೆ ಹಿಂದೂ ರಿಸರ್ಚ್ ಫೌಂಡೇಶನ್ ಕೊಡಮಾಡುವ ಸಪ್ತರ್ಷಿ ಪುರಸ್ಕಾರ ಶೃಂಖಲಾ-2024ರ ನಾಗಾರ್ಜುನ ಪ್ರಶಸ್ತಿ ದೊರಕಿದ ಹಿನ್ನೆಲೆಯಲ್ಲಿ ಪಟ್ಟಣದ ಚಂದನ ಸ್ಕೂಲ್‌ನ ಸಂಸ್ಥಾಪಕ ಟಿ.ಈಶ್ವರ ಅವರು ಸಿಎನ್‌ಆರ್ ಅವರನ್ನು ಅಭಿನಂದಿಸಿದರು.

ರಾವ್ ಅವರ ಮೆಚ್ಚಿನ ಶಾಲೆಗಳಲ್ಲಿ ಪ್ರಮುಖವಾಗಿರುವ ಪಟ್ಟಣದ ಸ್ಕೂಲ್ ಚಂದನದ ವಿದ್ಯಾರ್ಥಿಗಳು, ನಿರ್ದೇಶಕರು, ಪ್ರಾಂಶುಪಾಲರು, ಸಿಬ್ಬಂದಿಗಳ ಪರವಾಗಿ ಸಂಸ್ಥಾಪಕ ಟಿ.ಈಶ್ವರ ಹಾಗೂ ಗಿರಿಜಾ ಈಶ್ವರ ಅವರು ಬೆಂಗಳೂರಿನ ಜವಹರಲಾಲ್ ನೆಹರು ಸೆಂಟರ್ ಫಾರ್ ಅಡ್ವಾನ್ಸ್ಡ ಸೈಂಟಿಫಿಕರಿಸರ್ಚ್ (ಎಓಅಂಖಖ) ಅಭಿನಂದಿಸಿದರು.

## ಸುಪ್ರೀಂ ಕೋರ್ಟ್‌ನ ಒಳ ಮೀಸಲಾತಿ ಜಾರಿಗೆ ಆಗ್ರಹಿಸಿ ಸಚಿವ ಎಚ್.ಕೆ. ಪಾಟೀಲರಿಗೆ ಮನವಿ


# ಸುಪ್ರೀಂ ತೀರ್ಪನ್ನು ಯಥವತ್ತಾಗಿ ಜಾರಿಗೊಳಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಸಂವಿಧಾನ ಪೀಠದ ತೀರ್ಪಿಗೆ ಬದ್ಧರಾಗದೇ ಜಾತಿ ಜನಗಣತಿ ವರದಿ ಬಿಡುಗಡೆ ನೆಪವೊಡ್ಡಿ ಒಳಮೀಸಲಾತಿ ಜಾರಿ ತಡಮಾಡುತ್ತಿರುವ ಸರ್ಕಾರದ ನಡೆ ಖಂಡಿಸಿ ಗದಗ ಜಿಲ್ಲಾ ಡಾ. ಬಾಬಾಸಾಹೇಬ್ ಅಂಬೇಡ್ಕರ ಹಾಗೂ ಡಾ. ಬಾಬು ಜಗಜೀವನರಾಮ ಸಮಾನತೆ ಸಮಿತಿಯ ವತಿಯಿಂದ ರಾಜ್ಯ ಡಿ.ಎಸ್.ಎಸ್. ಸಂಚಾಲಕ ಎಸ್.ಎನ್. ಬಳ್ಳಾರಿ, ಯುವರಾಜ ಬಳ್ಳಾರಿ ನೇತೃತ್ವದಲ್ಲಿ ಕಾನೂನು, ಸಂಸದೀಯ ವ್ಯವಹಾರ, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಕೆ. ಪಾಟೀಲರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.

ಮನವಿ ಸಲ್ಲಿಸಿ ಯುವರಾಜ ಬಳ್ಳಾರಿ ಮಾತನಾಡಿ, ಸಂವಿಧಾನ ಪ್ರಧಾನ ಆಶಯವಾಗಿರುವ ಸಾಮಾಜಿಕ ನ್ಯಾಯವನ್ನು ಖಾತರಿಪಡಿಸುವ ಉದ್ದೇಶದಿಂದ ಸಾಮಾಜಿಕ, ರಾಜಕೀಯ, ಆರ್ಥಿಕ, ಶೈಕ್ಷಣಿಕ, ಉದ್ಯೋಗ ಹೀಗೆ ಸಾರ್ವಜನಿಕ ಜೀವನದ ಎಲ್ಲ ರಂಗಗಳಲ್ಲಿ ಸಮರ್ಪಕ ಪ್ರಾತಿನಿಧ್ಯ ತತ್ವವನ್ನು ಅಳವಡಿಸಿ ಮೀಸಲಾತಿ ಸೌಲಭ್ಯವನ್ನು ಶಾಸನಬದ್ಧವಾಗಿ ಜಾರಿಗೆ ತರಲಾಗಿದೆ. ಆದರೆ ಕಾಲಾಂತರದಲ್ಲಿ ಸ್ಪ್ರಶ್ಯ ಜಾತಿಗಳನ್ನು ಅಸ್ಪ್ರಶ್ಯ ಜಾತಿಗಳ ಪಟ್ಟಿಗೆ ಸೇರಿಸಿದ್ದರಿಂದ ಮೀಸಲಾತಿ ನೀತಿಯ ಮೂಲ ಉದ್ದೇಶವೇ ವಿಫಲಗೊಂಡಿತು.

ಇದರಿಂದ ನೊಂದು-ಬೆಂದ ಮಾದಿಗ



ಸಮಾಜವು ವೈಜ್ಞಾನಿಕ ಸ್ವರೂಪದ ಆಂತರಿಕ ಮೀಸಲಾತಿಗಾಗಿ ಕಳೆದ 30 ವರ್ಷಗಳಿಂದ ಪ್ರತಿಭಟನೆ ಮಾಡುತ್ತ ಕಾನೂನು ಹೋರಾಟ ನಡೆಸುತ್ತಿದೆ. ಮೂರು ದಶಕಗಳ ನಿರಂತರ ಹೋರಾಟದಿಂದ ಮಾದಿಗ ಸಂಘಟನೆಗಳು ಮಾನಸಿಕ-ದೈಹಿಕ ಚಿತ್ರಹಿಂಸೆಯ ಪರಿಣಾಮವಾಗಿ ಕರ್ನಾಟಕ ಸರ್ಕಾರ ನ್ಯಾ. ಎ.ಜೆ. ಸದಾಶಿವ ಆಯೋಗವನ್ನು ರಚಿಸಿ ಅದರ ವರದಿಯನ್ನು ಪಡೆದಿದೆ. ತದನಂತರ ಸರ್ಕಾರ ಒಳಮೀಸಲಾತಿ ಕುರಿತು ಸಂಪುಟದ ಉಪಸಮಿತಿ ವರದಿಯನ್ನು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಿತು.

ಆದ್ದರಿಂದ ಘನವೆತ್ತ ಸರ್ಕಾರ ಅಗಸ್ಟ್ 1ರಂದು ಸುಪ್ರೀಂ ಕೋರ್ಟ್ ತೀರ್ಪು ನೀಡಿದಂತೆ ಒಳಮೀಸಲಾತಿ ಜಾರಿಗೊಳಿಸಬೇಕು. 2023ರ ಸಾರ್ವತ್ರಿಕ ಚುನಾವಣೆಯಲ್ಲಿ ಕಾಂಗ್ರೆಸ್ ತನ್ನ ಪ್ರಣಾಳಿಕೆಯಲ್ಲಿ 6ನೇ ಗ್ಯಾರಂಟಿ ಒಳಮೀಸಲಾತಿ ಕಲ್ಪಿಸಿಕೊಡುವುದಾಗಿ ಘೋಷಿಸಿಕೊಂಡಂತೆ ನಡೆದುಕೊಳ್ಳಬೇಕು ಹಾಗೂ ಒಳಮೀಸಲಾತಿ ಜಾರಿಯಾಗುವವರೆಗೆ ಬ್ಯಾಕ್‌ಲಾಗ್ ಹುದ್ದೆಗಳನ್ನು ಮತ್ತು ಇತರೆ ನೇಮಕಾತಿಗಳನ್ನು ಕೂಡಲೇ ರದ್ದುಪಡಿಸಬೇಕು ಹಾಗೂ ಸುಪ್ರೀಂಕೋರ್ಟಿನ ತೀರ್ಪನ್ನು ಕೂಡಲೇ ರಾಜ್ಯ ಸರ್ಕಾರ ಯಥವತ್ತಾಗಿ

> ಒಳಮೀಸಲಾತಿ ಕಲ್ಪಿಸುವ ಅಧಿಕಾರ ಮತ್ತು ಹೊಣೆಗಾರಿಕೆಯನ್ನು ಆಯಾ ರಾಜ್ಯ ಸರ್ಕಾರಗಳಿಗೆ ಸುಪ್ರೀಂ ಕೋರ್ಟ್ ಸ್ಪಷ್ಟವಾಗಿ ವಹಿಸಿದೆ. ಅಲ್ಲದೇ ಈ ಕುರಿತು ಸಂವಿಧಾನ ತಿದ್ದುಪಡಿಯ ಅಗತ್ಯವಿಲ್ಲವೆಂದು ಉಲ್ಲೇಖಿಸಿದೆ. ಈ ತೀರ್ಪನ್ನು ಮರುಪರಿಶೀಲಿಸುವ ಅರ್ಜಿಗಳನ್ನು ವಜಾಗೊಳಿಸಿದೆ. ಪರಿಶಿಷ್ಟ ಜಾತಿಗಳು ಏಕರೂಪಿಯಾಗಿಲ್ಲವೆಂದು ಹೇಳಿದ ಸುಪ್ರೀಂ ಕೋರ್ಟ್, ಆಯಾ ಜಾತಿಗಳ ಜನಸಂಖ್ಯೆಗೆ ಅನುಗುಣವಾಗಿ ಸಮಾನ ಅವಕಾಶ ಮತ್ತು ಪ್ರಾತಿನಿಧ್ಯ ಒದಗಿಸುವುದು ಸಂವಿಧಾನ ಬದ್ಧವಾಗಿದೆ ಎಂದು ಉಚ್ಚರಿಸಿದಿದೆ ಎಂದರು.

ಜಾರಿಗೊಳಿಸಬೇಕೆಂದು ಒತ್ತಾಯಿಸಿದರು.

ಮನವಿ ಸ್ವೀಕರಿಸಿದ ಸಚಿವರು, ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಡಾ. ಬಾಬಾಸಾಹೇಬ್ ಅಂಬೇಡ್ಕರ ಹಾಗೂ ಡಾ. ಬಾಬು ಜಗಜೀವನರಾಮ ಸಮಾನತೆ ಸಮಿತಿಯ ಸದಸ್ಯರಾದ ಪೃಥ್ವಿ ಪರಾಪೂರ, ಪವನ ಬಳ್ಳಾರಿ, ಸುಂಕಪ್ಪ ಗುತ್ತಿ, ಹನಮಪ್ಪ ನೀಲಗುಂದ, ಪರಶುರಾಮ ದೊಡಮನಿ, ಈಶಪ್ಪ ಕಲ್ಲೂರ ನಾಗರಾಜ ಕಿನ್ನರ, ಮಹೇಶ ನಾನಬಲ್, ಗೋವಿಂದರಾಜ ಬಳ್ಳಾರಿ, ವರ್ಧನ್ ತೌಜಲ್, ನಿತಿನ್ ಬಳ್ಳಾರಿ ಮುಂತಾದವರು ಉಪಸ್ಥಿತರಿದ್ದರು.

## ಎಸ್.ಎ. ಪದವಿ ಕಾಲೇಜಿಗೆ ನ್ಯಾಕ್ ಸದಸ್ಯರ ಭೇಟಿ

# ಕಾಲೇಜಿನ ಸ್ಥಿತಿಗತಿಗಳ ಪರಿಶೀಲನೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಇಲ್ಲಿನ ಶ್ರೀ ಅನ್ನದಾನೇಶ್ವರ ಪದವಿ ಮಹಾವಿದ್ಯಾಲಯಕ್ಕೆ ಗುರುವಾರ ಮೂರು ಸದಸ್ಯರುಳ್ಳ ನ್ಯಾಕ್ ಸಮಿತಿ ಭೇಟಿ ನೀಡಿ ಕಾಲೇಜಿನ ಸ್ಥಿತಿಗತಿಗಳನ್ನು ಪರಿಶೀಲಿಸಿತು.

ಬೆಳಿಗ್ಗೆ 9ಕ್ಕೆ ಕಾಲೇಜು ಆವರಣವನ್ನು ಪ್ರವೇಶಿಸಿದ ಸಮಿತಿಯ ಸದಸ್ಯರು ಕಾಲೇಜಿನ ಆಹ್ಲಾದಕರ ವಾತಾವರಣವನ್ನು ಕಂಡು ಮುದಗೊಂಡರು. ಎನ್‌ಸಿಸಿ ವಿದ್ಯಾರ್ಥಿಗಳಿಂದ ಗೌರವ ರಕ್ಷೆಯನ್ನು ಸ್ವೀಕರಿಸಿದ ನ್ಯಾಕ್ ಸಮಿತಿಯ ಸದಸ್ಯರು ಜ್ಯೋತಿ ಬೆಳಗಿಸುವ ಮೂಲಕ ತಮ್ಮ ಕಾರ್ಯಗಳನ್ನು ಪ್ರಾರಂಭಿಸಿದರು.

ಕಾಲೇಜಿನ ಪ್ರಾಚಾರ್ಯ ಎಸ್.ಜಿ. ಕೇಶಣ್ಣವರ ಅವರೊಂದಿಗೆ ಮೊದಲ ಸಂಭಾಷಣೆಯ ಮೂಲಕ ತಮ್ಮ ಪರಿಶೀಲನಾ ಕಾರ್ಯವನ್ನು ಪ್ರಾರಂಭಿಸಿದ ಸದಸ್ಯರು, ನಂತರ ಒಂದೊಂದು ವಿಭಾಗದ ಮುಖ್ಯಸ್ಥರೊಂದಿಗೆ ಆಯಾ ವಿಭಾಗದಲ್ಲಿ ಆಗಿರುವ ಪ್ರಗತಿ ವರದಿಯನ್ನು ಪಡೆದುಕೊಂಡು ಪರಿಶೀಲನೆ ಮಾಡಿದರು.

ವಿದ್ಯಾರ್ಥಿಗಳೊಂದಿಗೆ ಸಂವಹನ ನಡೆಸಿದ ಸಮಿತಿಯ ಸದಸ್ಯರು, ಕಾಲೇಜಿನಲ್ಲಿನ ಕುಂದುಕೊರತೆಗಳನ್ನು,



ವಿದ್ಯಾಭ್ಯಾಸದ ಕ್ರಮಗಳನ್ನು ವಿದ್ಯಾರ್ಥಿಗಳಿಂದ ಕೇಳಿ ತಿಳಿದುಕೊಂಡರು. ಸಮಿತಿಯ ಸದಸ್ಯರ ಜೊತೆ ಸಭೆ ನಡೆಸಿ ಕಾಲೇಜು ಅಭಿವೃದ್ಧಿಗೆ ಅವರು ಕೈಗೊಳ್ಳಬಹುದಾದ ಕ್ರಮಗಳನ್ನು ತಿಳಿದುಕೊಂಡು ತಮ್ಮ ಸಲಹೆಗಳನ್ನು ನೀಡಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ, ಆಡಳಿತಾಧಿಕಾರಿ ಎನ್.ಆರ್. ಗೌಡರ, ಕಾಲೇಜು ಆಡಳಿತ ಮಂಡಳಿ ಅಧ್ಯಕ್ಷ ಬಸವರಾಜ ವೀರಾಪೂರ, ಆಡಳಿತ ಮಂಡಳಿ ಸದಸ್ಯ ವೀರಯ್ಯ ವಸ್ತ್ರದ, ಸದಸ್ಯರಾದ ಸೋಮಣ್ಣ ಹರ್ಲಾಪೂರ, ಬಿ.ಎಫ್. ಚೇಗರೆಡ್ಡಿ ಉಪಸ್ಥಿತರಿದ್ದರು.

> ಮೊದಲ ದಿನ ಅವರು ಜೀವಶಾಸ್ತ್ರ, ಸಸ್ಯಶಾಸ್ತ್ರ, ಭೌತಶಾಸ್ತ್ರ, ಗಣಿತಶಾಸ್ತ್ರ, ಭೂಗೋಳ ಶಾಸ್ತ್ರ, ವಾಣಿಜ್ಯ ಮತ್ತು ಇಂಗ್ಲೀಷ್ ವಿಷಯಗಳ ಪ್ರಗತಿ ಪರಿಶೀಲನೆ ನಡೆಸಿ, ಈ ಎಲ್ಲ ವಿಷಯಗಳ ಪ್ರಯೋಗಾಲಯಗಳ ಜೊತೆಗೆ ಭಾಷಾ ಪ್ರಯೋಗಾಲಯ, ಕಾಲೇಜು ಗ್ರಂಥಾಲಯ ಮತ್ತು ಬಾಲಿಕೆಯರ ಹಾಸ್ಟೆಲ್‌ಗಳಿಗೆ ಭೇಟಿ ನೀಡಿ ಅಲ್ಲಿನ ವ್ಯವಸ್ಥೆಗಳನ್ನು ಗಮನಿಸಿದರು.

ನ್ಯಾಕ್ ಸಮಿತಿಯ ಸದಸ್ಯರಾದ ಡಾ. ಜಯಪ್ರಕಾಶ ತ್ರಿವೇದಿ, ಡಾ. ಅಖಿಲ ಅಹ್ಮದ ಮತ್ತು ಉಷಾ ಮುಕುಂದನ್ ಅವರು ಮಧ್ಯಾಹ್ನ ಕಾಲೇಜಿನ ಹಿಂದಿನ ವಿದ್ಯಾರ್ಥಿಗಳೊಂದಿಗೆ ಮತ್ತು ಇಂದಿನ ವಿದ್ಯಾರ್ಥಿಗಳ ಪಾಲಕರೊಂದಿಗೆ ಸಂವಾದ ನಡೆಸಿ ಕಾಲೇಜಿನ ಪ್ರಗತಿ ನೋಟದ ಮಾಹಿತಿ ಪಡೆದರು. ಈ ಸಂದರ್ಭದಲ್ಲಿ ಕಾಲೇಜಿನ ಹಿಂದಿನ ವಿದ್ಯಾರ್ಥಿಗಳಾದ ಡಾ. ಆರ್.ಕೆ. ಗಚ್ಚಿನಮಠ, ಡಿ.ಎ. ಅರವಟಗಿಮಠ, ಅರುಣ ಬಿ. ಕುಲಕರ್ಣಿ, ಎಂ.ಎಸ್. ದಢೇಸೂರಮಠ, ನಿವೃತ್ತ ಪ್ರಾಚಾರ್ಯ ಸಿ.ಐ. ಮರಡಿಮಠ, ಉಪನ್ಯಾಸಕರಾದ ಎಸ್.ಎಚ್. ಕುಲಕರ್ಣಿ, ಎನ್.ಎಸ್. ಮಾಸರೆಡ್ಡಿ ಇನ್ನೂ ಮುಂತಾದವರಿದ್ದರು. ಸಂಜೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ವೀಕ್ಷಿಸಿದ ಸದಸ್ಯರು ತೃಪ್ತ ಭಾವನೆಯೊಂದಿಗೆ ಮರಳಿದರು.

## ರಿಯಾಲಿಟಿ ಶೋನಲ್ಲಿ ಪ್ರಶಸ್ತಿ ವಿಜೇತ ಮಾಂತೇಶ ಕರಮಣ್ಣವರರಿಗೆ ಅದ್ದೂರಿ ಸ್ವಾಗತ

# ನಾಡಿನ ಮನಗೆದ್ದ ಕಲಾವಿದ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಖಾಸಗಿ ವಾಹಿನಿಯಲ್ಲಿ ನಡೆದ ರಿಯಾಲಿಟಿ ಶೋನಲ್ಲಿ ಹಾಸ್ಯ ಅಭಿನಯದ ಮೂಲಕ ಪ್ರಶಸ್ತಿ ಗಿಟ್ಟಿಸಿಕೊಂಡ ಲಕ್ಷ್ಮೇಶ್ವರ ಮಾಂತೇಶ ಕರಮಣ್ಣವರ ಪ್ರಶಸ್ತಿಯೊಂದಿಗೆ ಲಕ್ಷ್ಮೇಶ್ವರಕ್ಕೆ ಆಗಮಿಸಿದಾಗ ಪಟ್ಟಣದ ವತಿಯಿಂದ ಸ್ವಾಗತಿಸಲಾಯಿತು.

ತನ್ನ ಸ್ವಂತ ಪ್ರಯತ್ನದಿಂದ ಹಾಗೂ ಪ್ರತಿಭೆಯ ಮೂಲಕ ಸಾಧನೆ ಮಾಡಬಹುದು ಎನ್ನುವದನ್ನು ಪಟ್ಟಣದ ಬಡ ಕುಟುಂಬದ ಕುಡಿ ಮಾಂತೇಶ ಕರಮಣ್ಣವರ ಸಾಬೀತು ಮಾಡಿದ್ದಾನೆ. ಪಟ್ಟಣದ ಈ ಯುವ ಪ್ರತಿಭೆ ನಾಡಿನ ಜನಮನ ಗೆದ್ದಿದ್ದಾನೆ.

ಕನ್ನಡ ವಾಹಿನಿಯೊಂದರ ರಿಯಾಲಿಟಿ ಶೋನಲ್ಲಿ ಹಾಸ್ಯದ ನಟನೆ ಮೂಲಕ ಮನೆ ಮಾತಾಗಿದ್ದ ಪಟ್ಟಣದ ಪ್ರತಿಭಾವಂತ ಯುವಕ ಮಾಂತೇಶ ಕರಮಣ್ಣವರ ಭಾಗವಹಿಸಿದ್ದ ನಿರೂಪಕಿ ಅನುಶ್ರಿಯವರ ತಂಡ ಗೆಲುವು ಸಾಧಿಸುವ ಮೂಲಕ ಪಟ್ಟಣದ ಕೀರ್ತಿಯನ್ನು ರಾಜ್ಯಾದ್ಯಂತ ವ್ಯಾಪಿಸಿದ್ದಾನೆ. ಕಲೆ, ಪ್ರತಿಭೆ ಎನ್ನುವದು ಯಾರ ಸ್ವತ್ತಲ್ಲ ಎನ್ನುವದಕ್ಕೆ ಮಾಂತೇಶ ಸಾಕ್ಷಿಯಾಗಿದ್ದು, ಈ ಕಲಾವಿದ




ಬಾಲ್ಯದಿಂದಲೂ ಕಡು ಬಡತನದ ನಡುವೆಯೇ ಪರಿಪಕ್ವ ಕಲಾವಿದನಾಗಿದ್ದಾನೆ.

ಪಟ್ಟಣದಲ್ಲಿ ಚಿಕ್ಕ ಚಹಾ ಅಂಗಡಿ ನಡೆಸುವ ಮಲ್ಲೇಶಪ್ಪ ಮತ್ತು ಗಂಗವ್ವ ಎನ್ನುವ ದಂಪತಿಗಳ ಪುತ್ರನಾಗಿರುವ ಮಾಂತೇಶ ಚಿಕ್ಕಂದಿನಿಂದಲೇ ಕಲೆಯಲ್ಲಿ ಅಸಕ್ತಿಯಿಂದ ತೊಡಗಿಸಿಕೊಂಡಿದ್ದ. ಹಲವಾರು ಅವಕಾಶಗಳು ಕಾರಣಾಂತರಗಳಿಂದ ತಪ್ಪಿಹೋಗಿದ್ದರೂ ಇದೀಗ ಅವನ ಕಲೆಗೆ ಬೆಲೆ ದೊರಕಿದೆ. ಅದೃಷ್ಟ ಈತನ ಕೈ ಹಿಡಿದಿದ್ದು, ರಾಜ್ಯದ ಜನತೆಯನ್ನು ಹಾಸ್ಯದ ಹೊನಲಲ್ಲಿ ತೇಲಿಸುವ ಮೂಲಕ ಎಲ್ಲರ ಮನ ಗೆದ್ದಿದ್ದಾನೆ.

ಪ್ರಶಸ್ತಿ ವಿಜೇತರಾದ ಮೇಲೆ

> ಕಲಿಸಿದ ಗುರುಗಳು, ತಂದೆ-ತಾಯಿ, ಹಿರಿಯರು ಪ್ರೋತ್ಸಾಹ ಕೊಟ್ಟಿದ್ದರ ಪರಿಣಾಮ ಈ ಹಂತಕ್ಕೆ ಬೆಳೆಯಲು ಸಾಧ್ಯವಾಗಿದೆ. ಗದಗ ಜಿಲ್ಲೆಯಿಂದ ಕನ್ನಡ ಚಿತ್ರರಂಗದಲ್ಲಿ ನಟನಾಗಬೇಕು ಎಂಬ ಆಸೆಯಿದ್ದು, ಎಲ್ಲರ ಆಶೀರ್ವಾದದಿಂದ ಅವಕಾಶ ದೊರೆಯಬೇಕಿದೆ.
>
> **- ಮಾಂತೇಶ ಕರಮಣ್ಣವರ.**
> ವಿಜೇತ ಕಲಾವಿದ.

ಗುರುವಾರ ಪಟ್ಟಣಕ್ಕೆ ಆಗಮಿಸಿ ಮಾಂತೇಶ ಕರಮಣ್ಣವರ, ಕಲಾವಿದರಾದ ಹರೀಶ, ಉಮೇಶ ಕಿನ್ನಾಳ, ಅವರನ್ನು ಇಲ್ಲಿನ ಜನರು ಶಿಗ್ಲಿ ನಾಕಾ ಬಳಿ ಅದ್ದೂರಿಯಾಗಿ ಸ್ವಾಗತಿಸಿದರು. ತಹಸೀಲ್ದಾರ ವಾಸುದೇವ ಸ್ವಾಮಿ, ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಪಿಎಸ್‌ಐ ಈರಪ್ಪ ರಿತ್ತಿ ಅವರು ಕಲಾವಿದನಿಗೆ ಸತ್ಕರಿಸಿ ಶುಭಹಾರೈಸಿದರು. ನಂತರ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಕಲಾವಿದರನ್ನು ತೆರೆದ ವಾಹನದಲ್ಲಿ ಮೆರವಣಿಗೆಯ ಮೂಲಕ ಕರೆತರಲಾಯಿತು.

ಈ ಸಂದರ್ಭದಲ್ಲಿ ತಂದೆ ಮಲ್ಲೇಶಪ್ಪ, ತಾಯಿ ಗಂಗವ್ವ, ವಿ.ಜಿ. ಪಡಗೇರಿ, ಸುನೀಲ ಮಹಾಂತಶೆಟ್ಟರ, ವಿಜಯಕುಮಾರ ಹತ್ತಿಕಾಳ, ವೀರೇಂದ್ರ ಪಾಟೀಲ, ಸೋಮಣ್ಣ ಬೆಟಗೇರಿ, ಬಸಣ್ಣ ಬೆಟಗೇರಿ, ನೀಲಪ್ಪ ಪಡಗೇರಿ, ಸುರೇಶ ಹಟ್ಟಿ, ಹರೀಶ ಲಕ್ಷ್ಮೇಶ್ವರ ಮುಂತಾದವರಿದ್ದರು.

# ವೀರರಾಣಿ ಚನ್ನಮ್ಮಳಂತೆ ಧೀರರಾಗಿ


■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಭಾರತದ ಸ್ವಾತಂತ್ರ್ಯದ ಕಿಚ್ಚು ಹೊತ್ತಿಸಿದ ಮೊದಲ ಮಹಿಳೆ ಕಿತ್ತೂರು ಚನ್ನಮ್ಮ. ಮಹಿಳೆಯಾಗಿದ್ದರೂ ಆಕೆ ಬ್ರಿಟಿಷರ ವಿರುದ್ಧ ನಡೆಸಿದ ಹೋರಾಟವನ್ನು ನಾವೆಂದಿಗೂ ಮರೆಯುವಂತಿಲ್ಲ. ಸಂಗೊಳ್ಳಿ ರಾಯಣ್ಣನಂತಹ ಭಂಟನನ್ನು ತನ್ನ ಸೇನೆಯಲ್ಲಿ ಹೊಂದಿದ್ದ ಚನ್ನಮ್ಮ ಬ್ರಿಟಿಷರಿಗೆ ಸಿಂಹಸ್ವಪ್ನವಾಗಿದ್ದಳು ಎಂದು ನರೇಗಲ್ಲ ಪಟ್ಟಣ ಪಂಚಾಯತಿ ಅಧ್ಯಕ್ಷ ಫಕೀರಪ್ಪ ಮಳ್ಳಿ ಹೇಳಿದರು.

ಬುಧವಾರ ಪಟ್ಟಣ ಪಂಚಾಯಿತಿಯಲ್ಲಿ ಆಚರಿಸಲಾದ ವೀರರಾಣಿ ಕಿತ್ತೂರು ಚನ್ನಮ್ಮಳ ಜಯಂತ್ಯುತ್ಸವ ಮತ್ತು ವಿಜಯೋತ್ಸವದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಓರ್ವ ಮಹಿಳೆ ಧೀರಳಾಗಿ, ಸ್ವಾಭಿಮಾನಿಯಾಗಿ, ತನ್ನತನವನ್ನು ಬಿಟ್ಟುಕೊಡದೆ ಹೇಗೆ ಬದುಕಬೇಕೆಂಬುದಕ್ಕೆ ಚನ್ನಮ್ಮ ಉತ್ತಮ ಉದಾಹರಣೆಯಾಗಿದ್ದಾಳೆ. ಭಾರತದ ಸ್ವಾತಂತ್ರ್ಯಕ್ಕಾಗಿ ತನ್ನ ಪ್ರಾಣವನ್ನೇ ಮುಡುಪಾಗಿಟ್ಟು ಹೋರಾಡಿದ ಚನ್ನಮ್ಮ ಎಲ್ಲರಿಗೂ ಆದರ್ಶಳಾಗಿದ್ದಾಳೆ. ಅಂತಹ ಮಹನೀಯರ ಜೀವನ ಚರಿತ್ರೆಯನ್ನು ಎಲ್ಲರೂ ಓದಿ ಮನನ ಮಾಡಿಕೊಂಡು ಅವಳಂತೆಯೆ ಧೀರ, ಶೂರರಾಗಬೇಕೆಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಪಟ್ಟಣದ ಪಂಚಮಸಾಲಿ ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷ ಮುತ್ತಣ್ಣ ಪಲ್ಲೇದ, ಪ.ಪಂ ಮಾಜಿ ಅಧ್ಯಕ್ಷ ಕಲ್ಮೇಶ ತೊಂಡಿಹಾಳ, ಶಿಕ್ಷಕ ಎಂ.ಕೆ. ಬೇವಿನಕಟ್ಟಿ, ಸದಸ್ಯರಾದ ದಾವೂದಲಿ ಕುದರಿ, ಶ್ರೀಶೈಲಪ್ಪ ಬಂಡಿಹಾಳ, ಮಲಿಕಸಾಬ ರೋಣದ, ಮಹಿಳಾ ಸದಸ್ಯೆಯರು, ವೀರಣ್ಣ ಗುಜಮಾಗಡಿ, ಸಮಾಜದ ಅನೇಕ ಮುಖಂಡರು, ಸಿಬ್ಬಂದಿಯವರಾದ ಎಂ.ಎಚ್. ಸೀತಿಮನಿ, ವಿ.ವೈ. ಮಡಿವಾಳರ, ರಮೇಶ ಹಲಗಿಯವರ, ಎ.ಎಸ್. ಮೆಣಸಗಿ, ರಕ್ಷಿತ್, ಎನ್.ಬಿ. ಬೇಲೇರಿ, ಶಂಕ್ರಪ್ಪ ದೊಡ್ಡಣ್ಣವರ, ಲಕ್ಷ್ಮಣ ಕುಣಿಗೇರಿ, ಕಾವ್ಯಾ ಅರವಟಗಿಮಠ, ನಿರ್ಮಲಾ ಕಡೆತೋಟದ, ಜಮೀಲಾಬೇಗಂ ಬಂಕಾಪೂರ, ಉದಯ ಮುದೇನಗುಡಿ ಮತ್ತಿತರರು ಉಪಸ್ಥಿತರಿದ್ದರು.



# ಸಿ.ಸಿ. ಪಾಟೀಲರ 66ನೇ ಜನ್ಮದಿನಾಚರಣೆ




■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮಾಂಗಲ್ಯ ಮಂದಿರದಲ್ಲಿ ಭಾರತೀಯ ಜನತಾ ಪಾರ್ಟಿ ಹಾಗೂ ಸಿ.ಸಿ. ಪಾಟೀಲ ಅಭಿಮಾನಿ ಬಳಗದಿಂದ ಮಾಜಿ ಲೋಕೋಪಯೋಗಿ ಸಚಿವ ಹಾಗೂ ನರಗುಂದ ವಿಧಾನಸಭಾ ಮತಕ್ಷೇತ್ರದ ಶಾಸಕ ಸಿ.ಸಿ. ಪಾಟೀಲರವರ 66ನೇ ವರ್ಷದ ಜನ್ಮದಿನದ ಅಂಗವಾಗಿ ಅಂಧ, ಅನಾಥ ಮತ್ತು ಕಾಶೀ ಪೀಠದ ವಟುಗಳಿಗೆ ಹಾಗೂ ಪೌರಕಾರ್ಮಿಕರಿಗೆ ಬಟ್ಟೆ ವಿತರಣಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಶಾಸಕ ಸಿ.ಸಿ. ಪಾಟೀಲರನ್ನು ಸನ್ಮಾನಿಸಿ ಮಾತನಾಡಿದ ಬಿಜೆಪಿ ಉಪಾಧ್ಯಕ್ಷ ಭದ್ರೇಶ ಕುಸ್ಲಾಪೂರ, ಸಿ.ಸಿ. ಪಾಟೀಲ ಗದಗ ಜಿಲ್ಲೆಗೆ ರಾಜ್ಯ ಮತ್ತು ಕೇಂದ್ರ ಸರ್ಕಾರದ ಜನಪ್ರಿಯ ಯೋಜನೆಗಳನ್ನು ಜಾರಿಗೆ ತಂದು ಜನರಿಗೆ ಸಾಕಷ್ಟು ಅನುಕೂಲ ಕಲ್ಪಿಸಿದ್ದಾರೆ. ಇವರ ನೇತೃತ್ವದಲ್ಲಿ ಗದಗ ಜಿಲ್ಲೆಯಲ್ಲಿ ಬಿಜೆಪಿ ಪಕ್ಷ ಸಂಘಟನೆ ಬಲಿಷ್ಠಗೊಂಡಿದ್ದು, ನಾವೆಲ್ಲರೂ ಬಿಜೆಪಿ ಪಕ್ಷದ ಕಟ್ಟಾ ಅನುಯಾಯಿಗಳಾಗಿ ಸಿ.ಸಿ. ಪಾಟೀಲರ ಮಾರ್ಗದರ್ಶನದಲ್ಲಿ ಪಕ್ಷವನ್ನು ಸಂಘಟಿಸುತ್ತಿದ್ದೇವೆ ಎಂದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಬಿಜೆಪಿ ಅಧ್ಯಕ್ಷರಾದ ರಾಜು ಕುರಡಗಿ, ಮಂಜುನಾಥ ಹಿರೇಮಠ, ಸುಭಾಸ ಸುಂಕದ, ಬುದ್ಧಪ್ಪ ಹಳ್ಳಿ, ಫಕ್ಕೀರೇಶ ಸಿಂಧೆ, ವಾಯ್.ಪಿ. ಅಡ್ನೂರ, ಪ್ರಶಾಂತ ನಾಯ್ಕರ, ಶಿವು ಹಿರೇಮನಿಪಾಟೀಲ, ಡಾ. ಶೇಖರ ಸಜ್ಜನರ, ನಗರಸಭೆ ಮಾಜಿ ಅಧ್ಯಕ್ಷೆ ಉಷಾ ಮಹೇಶ ದಾಸರ, ನಗರಸಭೆ ಸದಸ್ಯರಾದ ವಿನಾಯಕ ಮಾನ್ವಿ ಸೇರಿದಂತೆ ಬಿಜೆಪಿ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.


ಕರ್ನಾಟಕ ಸರಕಾರ (ಜಿಲ್ಲಾ ಪಂಚಾಯತ್, ಗದಗ)

**ಕಾರ್ಯನಿರ್ವಾಹಕ ಇಂಜಿನೀಯರ, ಪಂಚಾಯತ್ ರಾಜ್ ಇಂಜಿನೀಯರಿಂಗ್ ವಿಭಾಗ, ಗದಗ.**

ನಂ:ಪಂ.ರಾಜ್.ಇಂ.ವಿ/ಗದಗ/ಪಿಬಿ.3/ಟೆಂಡರ/2024-25/1797

ದಿನಾಂಕ : 24-10-2024

**ಕೆಪಿಪಿ ಪೋರ್ಟಲ್ ಟೆಂಡರ ಪ್ರಕಟಣೆ**
**Standard Bid Document KG-1,KG-2 [ಎಕಲಕೋಟಿ ಪದ್ಧತಿ]**

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್-2000 ನಿಯಮದಂತೆ Standard Bid Document KG-1&2ರ ನಿಯಮಗಳನ್ವಯ ಅರ್ಹ ಗುತ್ತೇದಾರರಿಂದ **ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್** ಮುಖಾಂತರ 18 ಕಾಮಗಾರಿಯ ಟೆಂಡರನ್ನು ಆಹ್ವಾನಿಸಲಾಗಿದೆ. **ಲೆಕ್ಕ ಶೀರ್ಷಿಕೆ:** 2024-25ನೇ ಸಾಲಿನ ಮಹಾತ್ಮಾ ಗಾಂಧಿ ಉದ್ಯೋಗಖಾತ್ರಿ ಯೋಜನೆ ಟೆಂಡರನ್ನು ಆಹ್ವಾನಿಸಲಾಗಿದೆ. ಪಿ.ಡಬ್ಲು.ಡಿ. ಇಲಾಖೆಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರು **ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್,** (https://kppp.karnataka.gov.in) ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ ಇಂಡೆಂಟ್ ಸಂಖ್ಯೆ ಈ ಕೆಳಗಿನಂತೆ ಇರುತ್ತವೆ.

Indent Nos : **RDPR/2024-25/WORK_INDENT /CALL-3 3931, 3926, 3983, 3982, 4166, 4136, 3930, 3929, 3927, 4155, 3948, 3947, 3945, 3946, 3928, 3935, 3949, 4153,**

ಟೆಂಡರಿಗಿಟ್ಟ ಕನಿಷ್ಠ ಮೊತ್ತ ರೂ. **11.72** ಲಕ್ಷ ಮತ್ತು ಗರಿಷ್ಠ ಮೊತ್ತ ರೂ. **47.65** ಲಕ್ಷಗಳು

**ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ** : ಅರ್ಜಿ ಬೆಲೆ **ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್** ಇ.ಎಂ.ಡಿ. ಸಂಬಂಧಪಟ್ಟ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಇ-ಪ್ರೋಕ್ಯೂರಮೆಂಟ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್-ಬಿ ಯನ್ನು ವೆಬ್‌ಸೈಟಿನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ : **25-10-2024** ರಿಂದ **11-11-2024** ರಂದು 16.00 ಗಂಟೆಯವರೆಗೆ. ಆರ್ಥಿಕ ಬಿಡ್ ತೆರೆಯುವ ದಿನಾಂಕ : **13-11-2024** ರಂದು 16.30 ಗಂಟೆಗೆ ತೆರೆಯಲಾಗುವುದು. ಟೆಂಡರನ್ನು ಅನಾವರಣಗೊಳಿಸಿದ ದಿನಾಂಕದಿಂದ ಭಾಗವಹಿಸಿದ ಗುತ್ತಿಗೆದಾರರಲ್ಲಿ ಆರ್ಥಿಕ ಬಿಡ್‌ದಲ್ಲಿ ಅರ್ಹ ಗುತ್ತಿಗೆದಾರರು ಈ ಕಾರ್ಯಾಲಯಕ್ಕೆ ಹಾಜರಾಗಿ ವ್ಯತ್ಯಾಸದ ಮೊತ್ತ ಹಾಗೂ ಪಿ.ಎಸ್.ಡಿ. ಮೊತ್ತವನ್ನು ಎಫ್.ಡಿ.ಆರ್ ರೂಪದಲ್ಲಿ 20 ದಿನಗಳ ಒಳಗಾಗಿ (ಷರತ್ತು ಕ್ರ.ಸಂ :13 ರಂತೆ) ಭರಣಾ ಮಾಡಬೇಕು. ಇ-ಪದ್ಧತಿ ಇರುವುದರಿಂದ ಕಾಗದ ರಹಿತವಾಗಿದ್ದು ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶ ಇರುವುದಿಲ್ಲ. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

**ಸಹಿ/- ಕಾರ್ಯನಿರ್ವಾಹಕ ಇಂಜಿನೀಯರರು, ಪಂ.ರಾಜ್. ಇಂಜಿನೀಯರಿಂಗ್ ವಿಭಾಗ, ಗದಗ**

ವಾಸಾಸಂಇ/ಗದಗ/ಕೆಎಸ್‌ಎಂಸಿಎ/326/2024-25


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka